ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 233 RNI Number : KNKAN/25/A2770 04-09-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :233 ರಾಯಚೂರು 04-09-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಶೇ 5ರಷ್ಟು ಉದ್ಯಾನದ ಜಮೀನು ಬಳಸುವ ವಿವಾದಿತ ಮಸೂದೆ ಹಿಂಪಡೆಯಲು ಸಂಪುಟ ಸಭೆ ತೀರ್ಮಾನ

ಬೆಂಗಳೂರು: ಮೊನ್ನೆ ವಿಧಾನಮಂಡಲ ಅಧಿವೇಶನದಲ್ಲಿ ಅಂಗೀಕಾರವಾಗಿದ್ದ ವಿವಾದಿತ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ 2026ನ್ನು ಹಿಂಪಡೆಯಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಸಂಪುಟ ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿದ ಡಿಸಿಎಂ ಜಿ.ಪರಮೇಶ್ವರ್, ಮೊನ್ನೆ ನಡೆದ ಅಧಿವೇಶನದಲ್ಲಿ ಈ ಮಸೂದೆ ಬಗ್ಗೆ ಚರ್ಚೆಯೇ ನಡೆದಿರಲಿಲ್ಲ. ಅದನ್ನು ವಿಪಕ್ಷಗಳು ರಾಜಕೀಯವಾಗಿ ಬಳಸಿ, ಸಾರ್ವಜನಿಕರಿಗೆ ತಪ್ಪು ಸಂದೇಶಗಳನ್ನು ನೀಡಿದ್ದರು. ಈ ಹಿನ್ನೆಲೆ ಈಗ ಮಸೂದೆಯನ್ನು ಹಿಂಪಡೆಯಲು ತೀರ್ಮಾನಿಸಲಾಗಿದೆ. ಪ್ರಸ್ತಾಪಿತ ಮಸೂದೆಯನ್ನು ಸಾರ್ವಜನಿಕರ ಚರ್ಚೆಗೆ ಇಡಲಾಗುವುದು. ಈ ಬಗ್ಗೆ ಸಾರ್ವಜನಿಕರ ಅಭಿಪ್ರಾಯ ಪಡೆದು ಬಳಿಕ ಅದನ್ನು ಮುಂದಿನ ಅಧಿವೇಶನದಲ್ಲಿ ಮರು ಮಂಡನೆ ಮಾಡಲಿದ್ದೇವೆ. ಕೆಲ ತಿದ್ದುಪಡಿ ತಂದು ಮಸೂದೆಯನ್ನು ಮರು ಮಂಡನೆ ಮಾಡಲಾಗುವುದು. ಮಾರಾಟ, ಲೀಸ್, ಗಿಫ್ಟ್ ಈ ಅಂಶಗಳನ್ನು ಪುನರ್ ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.

ಈ ವಿವಾದಿತ ಮಸೂದೆ ಬಗ್ಗೆ ಸಾರ್ವಜನಿಕ ವಲಯ, ಪರಿಸರ ಪ್ರೇಮಿಗಳು ಹಾಗೂ ವಿಪಕ್ಷ ಬಿಜೆಪಿಯಿಂದ ತೀವ್ರ ಆಕ್ಷೇಪ ವ್ಯಕ್ತವಾಗಿತ್ತು. ಕಳೆದ ಭಾನುವಾರ ಲಾಲ್ ಬಾಗ್ ನಲ್ಲಿ ಪರಿಸರ ಪ್ರೇಮಿಗಳು, ನಾಗರಿಕರು ಈ ಮಸೂದೆ ವಿರುದ್ಧ ಪ್ರತಿಭಟನೆ ನಡೆಸಿದ್ದರು. ಇದೀಗ ಸಾರ್ವಜನಿಕರು, ಪ್ರತಿಪಕ್ಷಗಳು, ನಾಗರೀಕರ ಒತ್ತಡಕ್ಕೆ ಮಣಿದ ಸರ್ಕಾರ ವಿವಾದಿತ ಮಸೂದೆಯನ್ನು ಹಿಂಪಡೆಯಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿದೆ.

ಉದ್ಯಾನ ಮತ್ತು ತೋಟದ ಭೂಮಿಯನ್ನು ಸಾರ್ವಜನಿಕ ಮೂಲಸೌಕರ್ಯ ಮತ್ತು ಉಪಯುಕ್ತತೆಯ ಉದ್ದೇಶಗಳಿಗಾಗಿ (ಮಾರಾಟ, ಗುತ್ತಿಗೆ, ಕೊಡುಗೆ, ವಿನಿಮಯ ಅಥವಾ ಅಡಮಾನದ ಮೂಲಕ) ಶೇ.5 ರಷ್ಟು ಬಳಸಿಕೊಳ್ಳಲು ಅವಕಾಶ ನೀಡುವ ತಿದ್ದುಪಡಿ ಮಸೂದೆ ಇದಾಗಿದೆ. ಮೊನ್ನೆ ನಡೆದ ವಿಧಾನಮಂಡಲ ಅಧಿವೇಶನದಲ್ಲಿ ಪ್ರತಿಪಕ್ಷಗಳ ಪ್ರತಿಭಟನೆ, ಸದ್ದು ಗದ್ದಲದ ಮಧ್ಯೆ ಚರ್ಚೆ ಇಲ್ಲದೇ ಈ ಮಸೂದೆ ಅಂಗೀಕಾರವಾಗಿತ್ತು.

ಈ ಉದ್ದೇಶಿತ ವಿಧೇಯಕ ಸರ್ಕಾರದ ಇಲಾಖೆಗಳು, ಶಾಸನಬದ್ಧ ಪ್ರಾಧಿಕಾರಗಳು, ಸರ್ಕಾರಿ ಕಂಪನಿಗಳು ಅಥವಾ ಸಾರ್ವಜನಿಕ ಉಪಯುಕ್ತತೆಯ ಯೋಜನೆಗಳಿಗಾಗಿ ಸ್ಥಳೀಯ ಪ್ರಾಧಿಕಾರಗಳ ಪರವಾಗಿ ಮಾತ್ರ, ಉದ್ಯಾನವನದ ಒಟ್ಟು ವಿಸ್ತೀರ್ಣದ ಗರಿಷ್ಠ ಶೇಕಡಾ ಐದರಷ್ಟು ಭೂಮಿಯನ್ನು ಮಾರಾಟ, ಗೇಣಿ (ಲೀಸ್), ಕೊಡುಗೆ (ಗಿಫ್ಟ್), ವಿನಿಮಯ, ಅಡಮಾನ ಅಥವಾ ಇನ್ನಿತರ ಯಾವುದೇ ರೀತಿಯಲ್ಲಿ ಪರಭಾರೆ ಮಾಡಲು ರಾಜ್ಯ ಸರ್ಕಾರಕ್ಕೆ ಅನುಮತಿಯನ್ನು ನೀಡುವ ಅವಕಾಶ ಕಲ್ಪಿಸಿತ್ತು.

ತೋಟಗಾರಿಕೆ ಫಾರಂಗಳಲ್ಲಿ ತೋಟಗಾರಿಕೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅತ್ಯಂತ ಕನಿಷ್ಠ ವಿಸ್ತೀರ್ಣವನ್ನು ಬಳಸಿಕೊಳ್ಳಲು ಇದು ಅನುವು ಮಾಡಿಕೊಡಲಿದೆ. ಇದು ಕೊಯ್ಲೋತ್ತರ ಸಂಸ್ಕರಣಾ ಸೌಲಭ್ಯಗಳು, ಶೀತಲ ಶೇಖರಣಾ ಘಟಕಗಳು (ಕೋಲ್ಡ್ ಸ್ಟೋರೇಜ್), ಸುಧಾರಿತ ತಳಿಗಳ ಉತ್ಪಾದನೆ

3 ನೇ ಪುಟಕ್ಕೆ

ವಸತಿ ನಿಲಯದಲ್ಲಿ ಆಹಾರ ದೋಷದಿಂದ ಅಸ್ವಸ್ಥರಾದ ವಿದ್ಯಾರ್ಥಿಗಳ ಆರೋಗ್ಯವನ್ನು ವಿಚಾರಿಸಿದ ಬೋಸರಾಜು



ಮಾನ್ವಿ: ಪಟ್ಟಣದ ಸರಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಮುಸ್ಟೂರು ರಸ್ತೆಯಲ್ಲಿನ ಮುರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಸಹಿತ ಶಾಲೆಯಲ್ಲಿ ಆಹಾರದ ದೋಷದಿಂದ ತೀವ್ರ ಅಸ್ವಸ್ಥರಾಗಿ ದಾಖಲಾಗಿರುವ ಮಕ್ಕಳ ಆರೋಗ್ಯವನ್ನು ಮಾಜಿ ಸಚಿವರು ಹಾಗೂ ವಿಧಾನಪರೀಷತ್ ಸದಸ್ಯರಾದ ಎನ್.ಎಸ್.ಬೋಸರಾಜು ವಿಚಾರಿಸಿ ತಾಲೂಕು ಆರೋಗ್ಯಾಧಿಕಾರಿ ಡಾ.ಶರಣಬಸವರಾಜ ಹಾಗೂ ಸರಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಮಕ್ಕಳ ತಜ್ಞರು ಹಾಗೂ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ.ಶರಣಪ್ಪ ರವರಿಗೆ ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಹೆಚ್ಚಿನ ಚಿಕಿತ್ಸೆ ಅಗತ್ಯವಿದಲ್ಲಿ ರಾಯಚೂರು ರಿಮ್ಸ್‌ಗೆ ಕಳುಹಿಸಿ ಮಕ್ಕಳ ಆರೋಗ್ಯದ ಬಗ್ಗೆ ಪಾಲಕರಿಗೆ ಮಾಹಿತಿ ನೀಡುವಂತೆ ಸೂಚಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ.ಶರಣಬಸವರಾಜ ವಸತಿ ನಿಲಯದಲ್ಲಿ ಅಸ್ವಸ್ಥಗೊಂಡ 34 ಮಕ್ಕಳಿಗೆ ಅಗತ್ಯ ವೈದ್ಯಕೀಯ ಚಿಕಿತ್ಸೆ ಯನ್ನು ವಸತಿ ನಿಲಯದಲ್ಲಿ ನೀಡಿ ನಂತರ ಅವರಲ್ಲಿ ಹೆಚ್ಚಿನ ಚಿಕಿತ್ಸೆ ಅಗತ್ಯವಿರುವ ಇಬ್ಬರು

3 ನೇ ಪುಟಕ್ಕೆ

ಬೆದರಿಕೆ ಆರೋಪಕ್ಕೆ ದಾಖಲೆ ತೋರಿಸಿ: ಭೀಮಣ್ಣ ಮಂಚಾಲ ಸವಾಲು



ರಾಯಚೂರು,ಸೆ.03-

ಸಮಾಜದ ಕಾರ್ಯಕ್ರಮ ಹಾಗೂ ಹೋರಾಟಗಳನ್ನು ತಾವೊಬ್ಬರೇ ನಡೆಸುತ್ತಿರುವಂತೆ ಬಿಂಬಿಸಿಕೊಂಡು ಸುಳ್ಳು ಹಾಗೂ ಆಧಾರ ರಹಿತ ಹೇಳಿಕೆಗಳನ್ನು ನೀಡುವುದನ್ನು ರವೀಂದ್ರನಾಥ್ ಪಟ್ಟಿಯವರು ಬಿಡಬೇಕು ಎಂದು ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟದ ಪದಾಧಿಕಾರಿ ಭೀಮಣ್ಣ ಮಂಚಾಲ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮನ್ನು ಬೆದರಿಸಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರ ಸಮ್ಮುಖದಲ್ಲಿ ರವೀಂದ್ರನಾಥ್ ಪಟ್ಟಿಯವರು ಆರೋಪಿಸಿರುವುದು ಸತ್ಯಕ್ಕೆ ದೂರವಾದದ್ದು ಎಂದು ಹೇಳಿದರು. ಬೆದರಿಕೆ ನಡೆದಿರುವುದಕ್ಕೆ ದಾಖಲೆ ಅಥವಾ ಧ್ವನಿಮುದ್ರಿಕೆ ಇದ್ದರೆ ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು.

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ, ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮದ ರಾಣಿಯಮ್ಮ ಹಾಗೂ ದೇವದುರ್ಗ ತಾಲೂಕಿನ ಭೂಮಾನಂದ ಅವರ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರದ ಗಮನ ಸೆಳೆಯಲು ಬಲಗೈ ಸಮುದಾಯಗಳ ಒಕ್ಕೂಟದ ನಿಯೋಗ ಬೆಂಗಳೂರಿಗೆ ತೆರಳಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವ ಜಿ. ಪರಮೇಶ್ವರ್ ಸಚಿವ ಪ್ರಿಯಾಂಕ್ ಖರ್ಗೆ ಸೇರಿದಂತೆ ಹಲವು ಸಚಿವರು ಹಾಗೂ ಜನಪ್ರತಿನಿಧಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ ಎಂದರು.

ಮೂರು ಪ್ರಕರಣಗಳಲ್ಲೂ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಒತ್ತಾಯಿಸಲಾಗಿದೆ. ಗೃಹ ಸಚಿವರು ನಿಯೋಗವನ್ನು ಗದರಿಸಿ ಬೆದರಿಸಿದ್ದಾರೆ ಎಂಬ ಆರೋಪವೂ ಆಧಾರ ರಹಿತವಾಗಿದ್ದು, ಅಂತಹ ಘಟನೆ ನಡೆದಿದ್ದರೆ ಅದರ ವಿಡಿಯೋ ಅಥವಾ ಧ್ವನಿಮುದ್ರಿಕೆ ಬಹಿರಂಗ ಪಡಿಸಲಿ ಎಂದು ಹೇಳಿದರು.

ನಮ್ಮ ಸಂಘಟನೆಯ ಉದ್ದೇಶ ಸಮಾಜವನ್ನು ಒಗ್ಗೂಡಿಸುವುದೇ ಹೊರತು ಗುಂಪು ರಾಜಕಾರಣ ನಡೆಸುವುದಲ್ಲ. ಆದರೆ ಕೆಲವರು

3 ನೇ ಪುಟಕ್ಕೆ

ರೈತರ ಸಮಸ್ಯೆ ಚರ್ಚಿಸಲು ವಿಶೇಷ ಅಧಿವೇಶನ ಕರೆಯಿರಿ :ಸರ್ಕಾರಕ್ಕೆ ವಿಜಯೇಂದ್ರ ಒತ್ತಾಯ



ರಾಯಚೂರು,ಸೆ.3- ಎಸ್‌ಸಿಪಿ-ಟಿಎಸ್‌ಪಿ ಹಣವನ್ನು ಗ್ಯಾರಂಟಿಗಳಿಗೆ ಬಳಸುತ್ತಿದೆ. ಬರಪೀಡಿತ ರೈತರ 5 ಲಕ್ಷದವರೆಗೆ ಬೆಳೆ ಸಾಲ ಮನ್ನಾ ಮಾಡಿ, ರೈತರ ಸಮಸ್ಯೆ ಚರ್ಚಿಸಲು ವಿಶೇಷ ಅಧಿವೇಶನ ಕರೆಯಿರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ,ವೈ ವಿಜಯೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬಿಜೆಪಿಯ ಮೂರನೇ ದಿನದ ಪಾದಯಾತ್ರೆಗೆ ಚಾಲನೆ ನೀಡುವ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ವೈಫಲ್ಯಗಳು, ದಲಿತರು ಹಾಗೂ ಶೋಷಿತ ಸಮುದಾಯಗಳನ್ನು ಕೇವಲ ಓಟ್ ಬ್ಯಾಂಕ್ ಆಗಿ ಬಳಸಿಕೊಳ್ಳುತ್ತಿದೆ. ದಲಿತರ ಅಭಿವೃದ್ದಿಗಾಗಿ ಮೀಸಲಿಟ್ಟಿರುವ ಎಸ್‌ಸಿಪಿ-ಟಿಎಸ್‌ಪಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ರಾಜ್ಯದ ಅನ್ನದಾತ ಗಂಭೀರ ಸಂಕಷ್ಟದಲ್ಲಿ ಸಿಲುಕಿದ್ದರೂ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 3,655 ರೈತರು ಆತಹತ್ಯೆಗೆ ಶರಣಾಗಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲೇ 937 ರೈತರು ಆತಹತ್ಯೆ ಮಾಡಿಕೊಂಡಿದ್ದಾರೆ. ಕಲಬುರಗಿಯಲ್ಲಿ 295, ರಾಯಚೂರಿನಲ್ಲಿ 169, ಬೀದರ್ 220 ಹಾಗೂ ಕೊಪ್ಪಳದಲ್ಲಿ 80ಕ್ಕೂ ಹೆಚ್ಚು ರೈತರ ಆತಹತ್ಯೆ ಪ್ರಕರಣಗಳು ನಡೆದಿವೆ. ಈ ಅಂಕಿ-ಅಂಶಗಳು ಸರ್ಕಾರದ ರೈತ ವಿರೋಧಿ ಧೋರಣೆಯನ್ನು ತೋರಿಸುತ್ತವೆ ಎಂದು ಕಿಡಿಕಾರಿದರು.

ಪ್ರಿಯಾಂಕ್ ಖರ್ಗೆ ಅವರೇ, ಕಲಬುರಗಿ ಜಿಲ್ಲೆಯಲ್ಲೇ 295 ರೈತರು ಆತಹತ್ಯೆ ಮಾಡಿಕೊಂಡಿರುವ ವಿಚಾರವನ್ನು ಗಂಭೀರವಾಗಿ ಗಮನಿಸಬೇಕು. ಅನ್ನದಾತನ ಸಂಕಷ್ಟಕ್ಕೆ ಸರ್ಕಾರ ಮಿಡಿಯುವ ಕಾಳಜಿ ತೋರಬೇಕು ಎಂದು ವಿಜಯೇಂದ್ರ ಹೇಳಿದರು. ರಾಜ್ಯದ ಸುಮಾರು 190ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗಿದ್ದು, ಬರಪೀಡಿತ ಪ್ರದೇಶಗಳ ರೈತರ ಬೆಳೆ ಸಾಲವನ್ನು 5 ಲಕ್ಷದವರೆಗೆ ಮನ್ನಾ ಮಾಡಬೇಕು

3 ನೇ ಪುಟಕ್ಕೆ

ಅಶ್ವಿನಿ ಕುಟುಂಬಕ್ಕೆ ₹4 ಲಕ್ಷ ನೆರವು; ಒಬ್ಬರಿಗೆ ಸರ್ಕಾರಿ ನೌಕರಿ ಭರವಸೆ-ಶಾಸಕ ಪ್ರಸಾದ್ ಅಬ್ಬಯ್ಯ



ರಾಯಚೂರು,ಸೆ.03-

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಆಗಸ್ಟ್ 19ರಂದು ಅತ್ಯಾಚಾರ ಹಾಗೂ ಕೊಲೆಯಾಗಿದ್ದ ಕುಮಾರಿ ಅಶ್ವಿನಿ ಅವರ ಕುಟುಂಬಕ್ಕೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಹಾಗೂ ಹುಬ್ಬಳ್ಳಿ-ಧಾರವಾಡ ಶಾಸಕ ಪ್ರಸಾದ್ ಅಬ್ಬಯ್ಯ ಭೇಟಿ ನೀಡಿ ಸಾಂತ್ವನ ಹೇಳಿದರು. ಕುಟುಂಬಕ್ಕೆ ಒಟ್ಟು ₹4 ಲಕ್ಷ ವೈಯಕ್ತಿಕ ನೆರವು ನೀಡುವುದಾಗಿ ತಿಳಿಸಿ, ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ದೊರಕಿಸಿಕೊಡುವ ಭರವಸೆ ನೀಡಿದರು.

ಪ್ರಿಯಾಂಕ್ ಖರ್ಗೆ ಅವರಿಂದ ₹1 ಲಕ್ಷ, ಸಚಿವ ಜಮೀರ್ ಅಹ್ಮದ್ ಅವರಿಂದ ₹2 ಲಕ್ಷ ಹಾಗೂ ತಮ್ಮ ವೈಯಕ್ತಿಕವಾಗಿ ₹1 ಲಕ್ಷ ಸೇರಿ ಒಟ್ಟು ₹4 ಲಕ್ಷ ನೆರವು ನೀಡಿರುವುದಾಗಿ ಪ್ರಸಾದ್ ಅಬ್ಬಯ್ಯ ತಿಳಿಸಿದರು.

ಅಶ್ವಿನಿ ಪ್ರಕರಣದ ತನಿಖೆಯನ್ನು ಯಾವುದೇ ಒತ್ತಡ ಅಥವಾ ಪ್ರಭಾವಕ್ಕೆ ಒಳಗಾಗದೆ ನಿಷ್ಪಕ್ಷಪಾತವಾಗಿ ನಡೆಸಿ, ಎಲ್ಲಾ ಆರೋಪಿಗಳಿಗೂ ರಾಜ್ಯಕ್ಕೆ ಮಾದರಿಯಾಗುವ ರೀತಿಯಲ್ಲಿ ಕಠಿಣ ಶಿಕ್ಷೆಯಾಗುವಂತೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಮಹಿಳೆಯರಿಗೆ ಧೈರ್ಯ ತುಂಬುವ ರೀತಿಯಲ್ಲಿ ಪೊಲೀಸ್ ಇಲಾಖೆ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಶೌಚಾಲಯ ನಿರ್ಮಾಣದ ಲೆಕ್ಕ ಕೇಳಿದ ಶಾಸಕ

ಅಶ್ವಿನಿ ಶೌಚಕ್ಕೆ ತೆರಳಿದ್ದ ಸಂದರ್ಭದಲ್ಲೇ ಈ ದುರಂತ ನಡೆದಿರುವ ಹಿನ್ನೆಲೆಯಲ್ಲಿ ಹೊಕ್ರಾಣಿ ಗ್ರಾಮದಲ್ಲಿ ಸರ್ಕಾರದಿಂದ ಇದುವರೆಗೆ ಎಷ್ಟು ಶೌಚಾಲಯಗಳು ಮಂಜೂರಾಗಿವೆ? ಎಷ್ಟು ವಾಸ್ತವವಾಗಿ ನಿರ್ಮಾಣಗೊಂಡಿವೆ? ಎಂಬುದರ ಸಂಪೂರ್ಣ ಮಾಹಿತಿಯನ್ನು ನೀಡುವಂತೆ ತಹಸೀಲ್ದಾರ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಪ್ರಸಾದ್ ಅಬ್ಬಯ್ಯ ಸೂಚಿಸಿದರು.

ಕುಟುಂಬದ ಸದಸ್ಯರಿಗೆ ತಮ್ಮ ವೈಯಕ್ತಿಕ ಮೊಬೈಲ್ ಸಂಖ್ಯೆಯನ್ನು ನೀಡಿ, ಯಾರಾದರೂ ಬೆದರಿಕೆ ಹಾಕಿದರೆ, ಬೈದರೆ ಅಥವಾ ಭಯ ಹುಟ್ಟಿಸಿದರೆ ಕೂಡಲೇ ಕರೆ ಮಾಡುವಂತೆ ತಿಳಿಸಿದರು. ಅಂತಹವರ ವಿರುದ್ಧ ಪೊಲೀಸರ ಮೂಲಕ ಕಾನೂನು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿ ಕುಟುಂಬಕ್ಕೆ ಆತ್ಮಸ್ಥೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಎಂ. ವಸಂತ್, ವಿಶ್ವನಾಥ್ ಪಟ್ಟಿ, ವೆಂಕಟೇಶ್ ರಾಂಪುರ, ತಮ್ಮಣ್ಣ ವಕೀಲರು, ಬಾಬು ಬಾಜಿ, ಭೀಮಣ್ಣ ಮಾಂಚಲ್, ಪ್ರಭುರಾಜ್ ಕೊಡ್ಲಿ, ಹನುಮಂತ ಕೋಟೆ, ಶಿವರಾಜ್ ಜಾನೇಕಲ್, ನಿರುಪಾದಿ ಸಾಸಲಮರಿ, ಹನುಮಂತ ವಕೀಲರು ಬೂದಿಹಾಳ, ಅಯ್ಯಪ್ಪ ವಕೀಲರು, ಪುಷ್ಪರಾಜ್, ಭೀಮಣ್ಣ ಗಾರಲದಿನ್ನಿ, ಶಿವರಾಜ್ ಊಮಳಿ ಹೊಸೂರು, ಹನುಮಂತ ಜಾನೇಕಲ್, ರಾಮಕೃಷ್ಣ ಸೇರಿದಂತೆ ಮಾನ್ವಿ ತಹಸೀಲ್ದಾರ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

ಸಿಇಐಆರ್ ಪೋರ್ಟಲ್ ಮೂಲಕ ಕಳೆದುಹೋದ ಮೊಬೈಲ್‌ಗಳ ಪತ್ತೆ: ವಾರಸುದಾರರಿಗೆ ಹಸ್ತಾಂತರ



ಗಂಗಾವತಿ, ಸೆ.3: ಗಂಗಾವತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಾರ್ವಜನಿಕರು ಕಳೆದುಕೊಂಡಿದ್ದ ಮೊಬೈಲ್‌ಗಳನ್ನು ಸಿಇಐಆರ್‌ಪೋರ್ಟಲ್ ಮೂಲಕ ತಾಂತ್ರಿಕವಾಗಿ ಪತ್ತೆಹಚ್ಚಿ, ಇಂದು ಸಂಬಂಧಪಟ್ಟ ವಾರಸುದಾರರಿಗೆ ಗಂಗಾವತಿ ನಗರ ಪೊಲೀಸ್ ಠಾಣೆ ಪಿಐ ಪ್ರಕಾಶ ಯಾತನೂರು ಇವರು ಹಸ್ತಾಂತರಿಸಲಾಯಿತು.

ಮೊಬೈಲ್ ಕಳೆದುಕೊಂಡಿರುವ ಬಗ್ಗೆ ಸಾರ್ವಜನಿಕರು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಪೋರ್ಟಲ್‌ನಲ್ಲಿ ಮೊಬೈಲ್‌ಗಳ ಸಂಖ್ಯೆಯನ್ನು ದಾಖಲಿಸಿ, ಅವುಗಳ ಬಳಕೆಯನ್ನು ಪತ್ತೆಹಚ್ಚುವ ಕಾರ್ಯ ಕೈಗೊಂಡಿದ್ದರು. ಕಾರ್ಯಾಚರಣೆಯ ಫಲವಾಗಿ ಪತ್ತೆಯಾದ ಮೊಬೈಲ್‌ಗಳನ್ನು ಪರಿಶೀಲನೆ ನಡೆಸಿ, ಅವುಗಳ ನೈಜ ವಾರಸುದಾರರನ್ನು ಖಚಿತಪಡಿಸಿಕೊಂಡ ಬಳಿಕ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಪೊಲೀಸರು ಸಾರ್ವಜನಿಕರು ತಮ್ಮ ಮೊಬೈಲ್ ಕಳೆದುಕೊಂಡಲ್ಲಿ ತಕ್ಷಣವೇ ಸಮೀಪದ ಪೊಲೀಸ್ ಠಾಣೆಗೆ ದೂರು ನೀಡಿ, ಮೊಬೈಲ್‌ನ ಸಂಖ್ಯೆ ಹಾಗೂ ಅಗತ್ಯ ದಾಖಲೆಗಳನ್ನು ಒದಗಿಸುವಂತೆ ಮನವಿ ಮಾಡಿದರು. ಪೋರ್ಟಲ್ ಮೂಲಕ ಕಳೆದುಹೋದ ಮೊಬೈಲ್‌ಗಳನ್ನು ಪತ್ತೆಹಚ್ಚಲು ಸಾಧ್ಯವಾಗುವುದರಿಂದ ಸಾರ್ವಜನಿಕರು ಈ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ನೂತನ ರೈಲ್ವೆ ನಿಲ್ದಾಣದಲ್ಲಿ ಗುಡ್ಸ್ ಪಾಯಿಂಟ್ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ: ಶಾಸಕ ಹಂಪನಗೌಡ ಬಾದರ್ಲಿ



ಸಿಂಧನೂರು:

ನೂತನ ರೈಲ್ವೆ ನಿಲ್ದಾಣದಲ್ಲಿ ಸಿಂಧನೂರು ತಾಲ್ಲೂಕಿನ ರೈತರಿಗೆ ಅನುಕೂಲವಾಗುವಂತೆ ಗುಡ್ಸ್ ಪಾಯಿಂಟ್ ನಿರ್ಮಾಣ ಮಾಡುವ ಕುರಿತು ಶಾಸಕ ಹಂಪನಗೌಡ ಬಾದರ್ಲಿ ಅವರು ಸ್ಥಳ ಪರಿಶೀಲನೆ ನಡೆಸಿದರು.

ಸಿಂಧನೂರು ತಾಲ್ಲೂಕಿನ ರೈತರಿಗೆ ರಸಗೊಬ್ಬರಗಳ ಸರಬರಾಜು ಹಾಗೂ ಸಾಗಾಟ ಸುಲಭವಾ ಗುವಂತೆ ಗುಡ್ಸ್ ಪಾಯಿಂಟ್ ನಿರ್ಮಿಸುವ ಕುರಿತು ಅಧಿಕಾ ರಿಗಳೊಂದಿಗೆ ಸುದೀರ್ಘವಾಗಿ ಚರ್ಚಿಸಲಾಯಿತು.

ಗುಡ್ಸ್ ಪಾಯಿಂಟ್‌ಗೆ ಅಗತ್ಯವಿರುವ ರಸ್ತೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆಯೂ ಸಮಗ್ರವಾಗಿ ಪರಿಶೀಲನೆ ನಡೆಸಲಾಯಿತು.

★ ರೈತರ ಹಿತದೃಷ್ಟಿಯಿಂದ ಈ ಯೋಜನೆಗೆ ಕೇಂದ್ರ ರೈಲ್ವೆ ಇಲಾಖೆಯ ಸಚಿವರಿಂದ ಶೀಘ್ರ ಅನುಮೋದನೆ ದೊರೆಯುವಂತೆ ಪ್ರಸ್ತಾವನೆ ಸಲ್ಲಿಸಿ, ಕಾಮಗಾರಿ ಶೀಘ್ರವಾಗಿ ಕೈಗೊಳ್ಳುವಂತೆ ಕ್ರಮವಹಿಸಲು ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಸಿಂಧನೂರು ತಹಶೀಲ್ದಾರರಾದ ಅರುಣ್ ದೇಸಾಯಿ, ಭೂಸ್ವಾಧೀನ ಪದಾಧಿಕಾರಿಗಳಾದ ಶ್ರುತಿ ಕೆ., ರೈಲ್ವೆ ಇಲಾಖೆಯ ಹುಬ್ಬಳ್ಳಿ ವಿಭಾಗದ ಉಪಮುಖ್ಯ ಅಭಿಯಂತರರು ಹಾಗೂ ರಸಗೊಬ್ಬರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದು, ಸ್ಥಳ ವೀಕ್ಷಣೆ ನಡೆಸಿದರು.

ಅಶ್ವಿನಿ ಹತ್ಯೆ ಖಂಡಿಸಿ ಸಣ್ಣ ಬಾಬು ಟೈಗರ್ ಗ್ರೂಪ್ ಪ್ರತಿಭಟನೆ

ದಲಿತ ಮಹಿಳೆಯರಿಗೆ ರಕ್ಷಣೆ ನೀಡಲು ಸರ್ಕಾರ ವಿಫಲ; ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹ



ಕಲ್ಯಾಣ ಸಂಜೆ ಸುದ್ದಿ

ರಾಯಚೂರು,ಸೆ.03-

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ದಲಿತ ಯುವತಿ ಅಶ್ವಿನಿ ಅತ್ಯಾಚಾರ ಹಾಗೂ ಕೊಲೆ ಪ್ರಕರಣ ಖಂಡಿಸಿ, ಸಂತ್ರಸ್ತ ಕುಟುಂಬಕ್ಕೆ ನ್ಯಾಯ ಹಾಗೂ ದಲಿತ ಸಮುದಾಯದವರಿಗೆ ಸೂಕ್ತ ರಕ್ಷಣೆ ಒದಗಿಸುವಂತೆ ಆಗ್ರಹಿಸಿ ಸಣ್ಣ ಬಾಬು ಟೈಗರ್ ಗ್ರೂಪ್ ಅಧ್ಯಕ್ಷರ ನೇತೃತ್ವದಲ್ಲಿ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯಲ್ಲಿ ದಲಿತ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು, ಯುವಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರತಿಭಟನಾಕಾರರು 'ಜಸ್ಟೀಸ್ ಫಾರ್ ಅಶ್ವಿನಿ' ಎಂಬ ಫಲಕ ಹಿಡಿದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಅಶ್ವಿನಿ ಸೇರಿದಂತೆ ದಲಿತ ಯುವತಿಯರು ಹಾಗೂ ಯುವಕರ ಮೇಲೆ ನಡೆಯುತ್ತಿರುವ ಕೊಲೆ, ಅತ್ಯಾಚಾರ ಮತ್ತು ದೌರ್ಜನ್ಯ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಆರೋಪಿಗಳನ್ನು ತಕ್ಷಣ ಬಂಧಿಸಿ, ಕಾನೂನು ಪ್ರಕಾರ ತ್ವರಿತ ವಿಚಾರಣೆ ನಡೆಸಿ ಕಠಿಣ ಶಿಕ್ಷೆ ಕೊಡಿಸಬೇಕು ಎಂದು ಒತ್ತಾಯಿಸಿದರು. ಅಶ್ವಿನಿ ಪ್ರಕರಣದ ಕುರಿತು ನಿಷ್ಪಕ್ಷಪಾತ ಹಾಗೂ ಸಮಗ್ರ ತನಿಖೆಗೆ ಒತ್ತಾಯಿಸಿರುವುದು ವರದಿಯಾಗಿದೆ.

3 ನೇ ಪುಟಕ್ಕೆ

ನಶಾಮುಕ್ತ ಸಮಾಜ ನಿರ್ಮಾಣಕ್ಕೆ ಯುವಜನತೆ ಕೈಜೋಡಿಸಲಿ: ಡಾ. ಶರಣಪ್ರಕಾಶ್ ಪಾಟೀಲ್

ಕಲಬುರಗಿ,ಸೆ.03-

ನವ ಭಾರತ ನಿರ್ಮಾಣದಲ್ಲಿ ಯುವಜನತೆಯ ಪಾತ್ರ ಮಹತ್ವದ್ದಾಗಿದೆ. ಆರೋಗ್ಯವಂತ ಹಾಗೂ ಸದೃಢ ಸಮಾಜ ನಿರ್ಮಾಣಕ್ಕಾಗಿ ಯುವಕರು ದುಶ್ಚಟಗಳಿಂದ ದೂರವಿದ್ದು, ಕ್ರೀಡೆ, ವ್ಯಾಯಾಮ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಕರೆ ನೀಡಿದರು.

ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ಬುಧವಾರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಪೊಲೀಸ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಬೇಡ ಬ್ರೋ, ಆಪರೇಷನ್ ರೈಸ್, ನಶಾಮುಕ್ತ ಯುವ ಕರ್ನಾಟಕ ಹಾಗೂ ಅಂಗಾಂಗ ದಾನ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಬೃಹತ್ ವಾಕ್‌ಥಾನ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಮಾರ್ಗದರ್ಶನದಲ್ಲಿ ಪೊಲೀಸ್ ಇಲಾಖೆ ರಾಜ್ಯಾದ್ಯಂತ ಬೇಡ ಬ್ರೋ ಹಾಗೂ ಆಪರೇಷನ್ ರೈಸ್ ಅಭಿಯಾನಗಳನ್ನು ನಡೆಸುತ್ತಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವೂ ಈ ಅಭಿಯಾನಕ್ಕೆ ಕೈಜೋಡಿಸಿದ್ದು, ಕಲಬುರಗಿಯಲ್ಲಿ 17ನೇ ಜಿಲ್ಲಾ ಮಟ್ಟದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಯುವಜನತೆ ಸೇ ನೋ ಟು ಡ್ರಗ್ಸ್, ಸೇ ಯೆಸ್ ಟು ಲೈಫ್, ಸೇ ಯೆಸ್ ಟು ಫಿಟ್ ಎಂಬುದನ್ನು ಜೀವನದ ಮೂಲಮಂತ್ರವನ್ನಾಗಿಸಿಕೊಳ್ಳಬೇಕು. ವಿದ್ಯಾರ್ಥಿಗಳು ವ್ಯಸನಕ್ಕೆ ದಾರಿ ಮಾಡಿಕೊಡುವ ಕೆಟ್ಟ ಸಹವಾಸದಿಂದ ದೂರವಿರಬೇಕು. ಸ್ನೇಹಿತರಲ್ಲಿ ಯಾರಾದರೂ ವ್ಯಸನದ ಜಾಲಕ್ಕೆ ಸಿಲುಕಿರುವುದು ಕಂಡುಬಂದರೆ ಅವರನ್ನು ದೂರ ಮಾಡದೆ, ವ್ಯಸನದಿಂದ ಹೊರಬರಲು ನೆರವಾಗಬೇಕು ಎಂದು ಹೇಳಿದರು.

ಪ್ರತಿದಿನ ಕನಿಷ್ಠ ಒಂದು ಗಂಟೆಯನ್ನು ವ್ಯಾಯಾಮ, ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಮೀಸಲಿಡಬೇಕು. ದೈಹಿಕ ಆರೋಗ್ಯದ ಜತೆಗೆ ಉತ್ತಮ ಮಾನಸಿಕ ಆರೋಗ್ಯಕ್ಕೂ ಕ್ರೀಡೆ ಹಾಗೂ ವ್ಯಾಯಾಮ ಅಗತ್ಯ. ಇವು ಒತ್ತಡ ಕಡಿಮೆ ಮಾಡುವುದರ ಜತೆಗೆ ಆತ್ಮವಿಶ್ವಾಸ ಹಾಗೂ ಸಕಾರಾತ್ಮಕ ಚಿಂತನೆ ಬೆಳೆಸುತ್ತವೆ ಎಂದರು.



ಮಾದಕ ವಸ್ತುಗಳ ಮಾರಾಟ ಸೇರಿದಂತೆ ಯಾವುದೇ ಕಾನೂನುಬಾಹಿರ ಚಟುವಟಿಕೆಗಳು ಕಂಡುಬಂದರೆ ಸಾರ್ವಜನಿಕರು ಧೈರ್ಯದಿಂದ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಸಚಿವರು ಮನವಿ ಮಾಡಿದರು.

ಮೂರು ವರ್ಷದಲ್ಲಿ 22,899 ಪ್ರಕರಣ ದಾಖಲು:

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಎಸ್.ಡಿ. ಶರಣಪ್ಪ ಮಾತನಾಡಿ, ಕರ್ನಾಟಕ ಹಾಗೂ ಕಲಬುರಗಿ ನಗರವನ್ನು ಮಾದಕ ವಸ್ತು ಮುಕ್ತಗೊಳಿಸಲು ಪೊಲೀಸ್ ಇಲಾಖೆ ಸಂಕಲ್ಪ ತೊಟ್ಟಿದೆ. ಇದಕ್ಕಾಗಿ ಆಪರೇಷನ್ ರೈಸ್ ಹಾಗೂ ಬೇಡ ಬ್ರೋ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ. ಮಾದಕ ವಸ್ತುಗಳ ನಿರ್ಮೂಲನೆ ಕೇವಲ ಪೊಲೀಸ್ ಇಲಾಖೆಯಿಂದ ಸಾಧ್ಯವಿಲ್ಲ. ಯುವಜನತೆ, ಸಮುದಾಯ ಹಾಗೂ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯ ಎಂದರು.

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಾದಕ ವಸ್ತುಗಳ ಮಾರಾಟಕ್ಕೆ ಸಂಬಂಧಿಸಿದಂತೆ 22,899 ಪ್ರಕರಣಗಳು ದಾಖಲಾಗಿದ್ದು, 795 ಕೋಟಿ ಮೌಲ್ಯದ 28,292 ಕೆ.ಜಿ. ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. 31,271 ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಈವರೆಗೆ 9,556 ಮಂದಿಗೆ ಶಿಕ್ಷೆಯಾಗಿದೆ ಎಂದು ಮಾಹಿತಿ ನೀಡಿದರು.

ಹಿಂದೆ ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ಮಾತ್ರ ಪ್ರಕರಣ ದಾಖಲಿಸಲಾಗುತ್ತಿತ್ತು. ಇದೀಗ ಸೇವನೆ ಮಾಡುವವರ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಮಾದಕ ವಸ್ತುಗಳ ಸೇವನೆ ಅಥವಾ ಮಾರಾಟದ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದರೆ ತಕ್ಷಣ 112 ತುರ್ತು ಸಹಾಯವಾಣಿಗೆ ಮಾಹಿತಿ ನೀಡಬಹುದು ಎಂದರು.

ಮಾದಕ ವಸ್ತುಗಳ ವ್ಯಸನಕ್ಕೆ ಸಿಲುಕಿರುವ 480 ಮಂದಿಯನ್ನು ನಗರದ ವಿವಿಧೆಡೆ ಗುರುತಿಸಲಾಗಿದ್ದು, ಸನ್ಮಿತ್ರ ಯೋಜನೆಯಡಿ ಅವರನ್ನು ದುಶ್ಚಟದಿಂದ ಹೊರತರಲು ಪ್ರಯತ್ನಿಸಲಾಗುತ್ತಿದೆ. ಈವರೆಗೆ 200 ಯುವಕರನ್ನು ವ್ಯಸನದಿಂದ ಹೊರತರಲಾಗಿದೆ ಎಂದು ತಿಳಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ಮಾತನಾಡಿ, ಸಮಾಜ ಹಾಗೂ ರಾಜ್ಯ ಆರೋಗ್ಯವಂತವಾಗಬೇಕಾದರೆ ಮೊದಲು ಕಾಲೇಜು ಆವರಣಗಳು ನಶಾಮುಕ್ತವಾಗಬೇಕು. ಇದಕ್ಕಾಗಿ ಸಾಮೂಹಿಕ ಹೋರಾಟ ಅಗತ್ಯವಿದೆ ಎಂದರು. 18 ರಿಂದ 30 ವರ್ಷದೊಳಗಿನ ಯುವಕರು ಹಾಗೂ ವಿದ್ಯಾರ್ಥಿಗಳು ಮಾದಕ ವಸ್ತುಗಳ ಜಾಲಕ್ಕೆ ಸಿಲುಕುತ್ತಿರುವುದು ಆತಂಕಕಾರಿ. ಇದು ಜೀವನವನ್ನು ಕಟ್ಟಿಕೊಳ್ಳುವ ವಯಸ್ಸು . ಒಂದು ತಪ್ಪು ನಿರ್ಧಾರ, ತಪ್ಪು ಸ್ನೇಹ ಅಥವಾ ಕ್ಷಣಿಕ ಕುತೂಹಲ ಇಡೀ ಕುಟುಂಬದ ಭವಿಷ್ಯವನ್ನೇ ಹಾಳು ಮಾಡಬಹುದು. ಹೀಗಾಗಿ ಯುವಜನತೆ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು ಎಂದು ಅವರು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ:

ಕಾರ್ಯಕ್ರಮದಲ್ಲಿ ಕುಲಪತಿ ಡಾ. ಭಗವಾನ್ ಬಿ.ಸಿ. ಅವರು ವಿದ್ಯಾರ್ಥಿಗಳು ಹಾಗೂ ಯುವ ಸಮುದಾಯಕ್ಕೆ ನಶಾಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ ಮಾದಕ ವಸ್ತುಗಳನ್ನು ತ್ಯಜಿಸುವ ಹಾಗೂ ಅಂಗಾಂಗ ದಾನ ಮಾಡುವ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು.

ಇದೇ ಸಂದರ್ಭದಲ್ಲಿ ಜಿಮ್ಸ್ ವೈದ್ಯಕೀಯ ವಿದ್ಯಾರ್ಥಿಗಳು ಮಾದಕ ವ್ಯಸನದಿಂದ ಜೀವನದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಿರು ನಾಟಕ ಪ್ರದರ್ಶಿಸಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಸಂಸದ ರಾಧಾಕೃಷ್ಣ ದೊಡ್ಡಮನಿ, ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಶಶೀಲ ಜಿ. ನಮೋಶಿ, ಬಿ.ಜಿ. ಪಾಟೀಲ, ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಐಜಿಪಿ ಶಾಂತನು ಸಿನ್ಹಾ, ಪೊಲೀಸ್ ಆಯುಕ್ತ ಡಾ. ಎಸ್.ಡಿ. ಶರಣಪ್ಪ, ಎಸ್‌ಪಿ ಅಡ್ಡೂರು ಶ್ರೀನಿವಾಸುಲು, ಜಿಪಂ ಸಿಇಒ ರಾಹುಲ್ ಸಂಕನೂರ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್‌ಪಿ ಮಹೇಶ್ ಮೇಘಣ್ಣನವರ, ಜಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ. ಶಿವಕುಮಾರ ಸಿ.ಆರ್., ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಡಾ. ಎಂ.ಡಿ. ರಫೀಕ್, ಸೆನೆಟ್ ಸದಸ್ಯ ಡಾ. ಅರವಿಂದ ಕಟ್ಟಿ ಸೇರಿದಂತೆ ವಿವಿಧ ಅಧಿಕಾರಿಗಳು, ವೈದ್ಯರು, ಬೋಧಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮದ ಬಳಿಕ ಡಿಎಆರ್ ಪೊಲೀಸ್ ಪರೇಡ್ ಮೈದಾನದಿಂದ ಬೃಹತ್ ವಾಕ್‌ಥಾನ್‌ಗೆ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಚಾಲನೆ ನೀಡಿದರು. ಸಚಿವರು ವಿದ್ಯಾರ್ಥಿಗಳೊಂದಿಗೆ ಹೆಜ್ಜೆ ಹಾಕುವ ಮೂಲಕ ಅಭಿಯಾನಕ್ಕೆ ಉತ್ತೇಜನ ನೀಡಿದರು.

ವಾಕ್‌ಥಾನ್ ಏಷ್ಯನ್ ಮಾಲ್, ಐವಾನ್-ಎ-ಶಾಹಿ, ಜಿಲ್ಲಾಧಿಕಾರಿ ಕಚೇರಿ, ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತ ಹಾಗೂ ಆರ್ಕಿಡ್ ಮಾಲ್ ಮಾರ್ಗವಾಗಿ ಸಾಗಿ ಮರಳಿ ಡಿಎಆರ್ ಪೊಲೀಸ್ ಮೈದಾನದ ಹೆಲಿಪ್ಯಾಡ್ ಬಳಿ ಮುಕ್ತಾಯಗೊಂಡಿತು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಂಯೋಜಿತ ವಿವಿಧ ಕಾಲೇಜುಗಳ 8 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು, ಬೋಧಕರು ಹಾಗೂ ಸಿಬ್ಬಂದಿ ವಾಕ್‌ಥಾನ್‌ನಲ್ಲಿ ಭಾಗವಹಿಸಿ ನಶಾಮುಕ್ತ ಕರ್ನಾಟಕ ನಿರ್ಮಾಣದ ಸಂದೇಶ ಸಾರಿದರು.

ವಿದ್ಯಾರ್ಥಿಗಳಲ್ಲಿ ಅಂಬೇಡ್ಕರ್ ಜ್ಞಾನ ಹೆಚ್ಚಾಗಬೇಕು: ಕುಮಾರ್ ಬುರಡಿಕಟ್ಟಿ

ಕಲಬುರಗಿ,ಸೆ.03-

ಇಂದಿನ ವಿದ್ಯಾರ್ಥಿಗಳು ಮೌಢ್ಯವನ್ನು ಬಿತ್ತರಿಸುವ ವಾಟ್ಸ ಪ್ ಯುನಿವರ್ಸಿಟಿಯ ಪ್ರಭಾವದಿಂದ ಹೊರಬಂದು, ಡಾ. ಬಿ.ಆರ್. ಅಂಬೇಡ್ಕರ್ ಅವರ ಬರಹಗಳು ಮತ್ತು ಚಿಂತನೆಗಳನ್ನು ಹೆಚ್ಚು ಅಧ್ಯಯನ ಮಾಡಬೇಕು ಎಂದು ಪತ್ರಕರ್ತ ಕುಮಾರ್ ಬುರಡಿಕಟ್ಟಿ ಹೇಳಿದರು.

ನಗರದ ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿಯ ಡಾ. ಅಂಬೇಡ್ಕರ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರದ ಡಾ. ಅಂಬೇಡ್ಕರ್ ವಿಚಾರ ವೇದಿಕೆ ವತಿಯಿಂದ ಆಯೋಜಿಸಿದ್ದ ಕರ್ನಾಟಕದಲ್ಲಿ ಅಂಬೇಡ್ಕರ್ ಹೆಜ್ಜೆ ಗುರುತುಗಳು ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಹಿಂದೂ ಧರ್ಮವನ್ನು ತ್ಯಜಿಸಿ ಬೌದ್ಧ ಧಮ್ಮವನ್ನು ಸ್ವೀಕರಿಸಿದ್ದರೂ, ಕೆಲವು ಮತಾಂಧ ಶಕ್ತಿಗಳು ಅವರನ್ನು ಹಿಂದೂ ಧರ್ಮದ ಸುಧಾರಕರೆಂದು ಬಿಂಬಿಸುವ ಪ್ರಯತ್ನ ಮಾಡುತ್ತಿವೆ. ಇಂತಹ ಅಪಪ್ರಚಾರಗಳನ್ನು ವಿದ್ಯಾರ್ಥಿಗಳು ಅರ್ಥಮಾಡಿಕೊಳ್ಳಬೇಕು. ಅಂಬೇಡ್ಕರ್ ಅವರ ಕುರಿತು ಇತರರ ವ್ಯಾಖ್ಯಾನಗಳನ್ನು ಅವಲಂಬಿಸುವ ಬದಲು, ಅವರ ಮೂಲ ಬರಹಗಳನ್ನೇ ನೇರವಾಗಿ ಓದಿ ಅವರ ಚಿಂತನೆಗಳನ್ನು ಅರ್ಥಮಾಡಿಕೊಳ್ಳುವಂತಾಗಬೇಕು ಎಂದು ಅವರು ಹೇಳಿದರು.



ಚಿಂತಕ ಹಾಗೂ ಚಲನಚಿತ್ರ ನಿರ್ದೇಶಕ ಎನ್.ಎಸ್. ಶಂಕರ್ ನಿರ್ದೇಶಿಸಿರುವ, ಮೈಸೂರು ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ ಹಾಗೂ ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಹಯೋಗದಲ್ಲಿ ನಿರ್ಮಿಸಿರುವ ಕರ್ನಾಟಕದಲ್ಲಿ ಅಂಬೇಡ್ಕರ್ ಹೆಜ್ಜೆ ಗುರುತುಗಳು ಸಾಕ್ಷ್ಯಚಿತ್ರವನ್ನು ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗಾಗಿ ಪ್ರದರ್ಶಿಸಲಾಯಿತು.

ಈ ಸಾಕ್ಷ್ಯಚಿತ್ರದಲ್ಲಿ ಡಾ. ಅಂಬೇಡ್ಕರ್ ಅವರು ಬೆಳಗಾವಿ, ವಿಜಯಪುರ, ಬೆಂಗಳೂರು, ಕೆಜಿಎಫ್, ಹಾಸನ, ವಾಡಿ ಸೇರಿದಂತೆ ಕರ್ನಾಟಕದ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿದ ಸಂದರ್ಭಗಳನ್ನು ಸಂಶೋಧನೆ ನಡೆಸಿ ದಾಖಲಿಸಲಾಗಿದೆ. ಅಂಬೇಡ್ಕರ್ ಅವರ ಕರ್ನಾಟಕ ಪ್ರವಾಸ ಹಾಗೂ ಇಲ್ಲಿನ ಸಾಮಾಜಿಕ ಚಳವಳಿಗಳೊಂದಿಗೆ ಅವರಿಗಿದ್ದ ನಂಟನ್ನು ಪರಿಚಯಿಸುವ ಅಪರೂಪದ ಸಾಕ್ಷ್ಯಚಿತ್ರ ಇದಾಗಿದೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಅಂಬೇಡ್ಕರ್ ವಿಚಾರ ವೇದಿಕೆಯ ಸಂಚಾಲಕ ಡಾ. ಗಾಂಧೀಜಿ ಮೊಳಕೆರ ಅವರು ಸ್ವಾಗತಿಸಿದರು. ಡಾ. ಅರುಣ್ ಜೋಳದಕೂಡ್ಲಿಗಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಸಾಕ್ಷ್ಯಚಿತ್ರದ ಮಹತ್ವವನ್ನು ವಿವರಿಸಿದರು. ಇದೇ ಸಂದರ್ಭದಲ್ಲಿ ಇತ್ತೀಚೆಗೆ ನಿಧನರಾದ ನಿರ್ದೇಶಕ ಎನ್.ಎಸ್. ಶಂಕರ್ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿದ್ದಪ್ಪ ಎಸ್. ಕಾಂತ ಅವರು ಮಾತನಾಡಿ, ಕಾಲೇಜಿನಲ್ಲಿ ಡಾ. ಅಂಬೇಡ್ಕರ್ ಅವರ ವಿಚಾರಧಾರೆ ಹಾಗೂ ಸಂವಿಧಾನಿಕ ಮೌಲ್ಯಗಳ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ನಿರಂತರವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಕಾಲೇಜಿನ ಪ್ರಾಧ್ಯಾಪಕರಾದ ಡಾ. ನಿರ್ಮಲ ಶಿರಗಾಪುರ, ಡಾ. ವಸಂತ ನಾಶಿ, ಡಾ. ದತ್ತುರಾಯ ಶಿವರಾಜ, ಡಾ. ಶಿವಕುಮಾರ್, ಡಾ. ಸುರೇಶ್ ಕುಲಕರ್ಣಿ, ಡಾ. ಅರುಣ್ ಕುಮಾರ್ ಹಾಗೂ ಡಾ. ಕರಿಬಸಪ್ಪ ಸೇರಿದಂತೆ ಹಲವು ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಪಲ್ಲಕ್ಕಿ ಉತ್ಸವ

ವಾಡಿ,ಸೆ.03-

ಪಟ್ಟಣದ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಶ್ರಾವಣ ಮಾಸದ ಮೂರನೇ ಸೋಮವಾರ ಅದ್ದೂರಿ ಪಲ್ಲಕ್ಕಿ ಉತ್ಸವ ನಡೆಯಿತು.

ಈ ಸಂದರ್ಭದಲ್ಲಿ ಪಾಳಾದ ಶ್ರೀ ಗುರುಮೂರ್ತಿ ಸ್ವಾಮೀಜಿಗಳು ಆಶೀರ್ವಚನ ನೀಡಿ, ಪವಿತ್ರ ಶ್ರಾವಣ ಮಾಸದಲ್ಲಿ ಅವಶ್ಯಕತೆ ಇದ್ದವರಿಗೆ ಆರ್ಥಿಕ ದಾನ, ಅನ್ನದಾನ, ಪೂಜೆ, ಜಪ ಮತ್ತು ಸೇವೆಗಳನ್ನು ಮಾಡುವ ಮೂಲಕ ಸಾಕ್ಷಾತ್ಕಾರ ಪಡೆಯಿರಿ ಎಂದು ಹೇಳಿದರು. ವೀರಶೈವ ಸಮಾಜದ ಅಧ್ಯಕ್ಷರಾದ ಶರಣಗೌಡ ಪಾಟೀಲ, ಮಲ್ಲಿಕಾರ್ಜುನ ದೇವಸ್ಥಾನ ಸಮಿತಿ ಅಧ್ಯಕ್ಷರಾದ ಶಾಂತಪ್ಪ ಶೆಳ್ಳಗಿ, ಅಣ್ಣಾವ ಪಸಾರೆ ವೀರಶೈವ ಸಮಾಜದ ಕಾರ್ಯದರ್ಶಿ ಬಸವರಾಜ ಕಿರಣಗಿ, ಖಜಾಂಚಿ ಕಾಶಿನಾಥ ಶೆಟ್ಟಿಗಾರ, ಗುರುಶಾಂತಪ್ಪ ಕರದಳ್ಳಿ, ಸಂಗಣ್ಣ ಇಂಡಿ, ಬಸವರಾಜ ಶಟಗಾರ, ಭೀಮಶಾ ಜೀರೊಳ್ಳಿ, ನಿಂಗಣ್ಣ ದೊಡ್ಮನಿ, ರಾಜಶೇಖರ ದುಪ್ಪದ, ಚಂದ್ರು ಹಾವೇರಿ, ವೀರಣ್ಣ ನಾಲವಾರ, ಅರುಣಕುಮಾರ ಪಾಟೀಲ, ರಾಹುಲ ಸಿಂದಗಿ, ವಿಶ್ವ ಸಜ್ಜನ, ಮುರಳಿಧರ ಕುಲಕರ್ಣಿ, ಮಾದೇವ ಹಡಪದ, ಮಾಂತಪ್ಪ ಧರ್ಮಪುರ ಸೇರಿದಂತೆ ಹಲವರಿದ್ದರು.

ಕಲಬುರಗಿ ದಲಿತ ದೌರ್ಜನ್ಯ, ಕೊಲೆ ಪ್ರಕರಣಗಳ ಆರೋಪಿಗಳ ಬಂಧನಕ್ಕೆ ಒತ್ತಾಯಿಸಿ ಮಾದಿಗ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ



ಕಲಬುರಗಿ,ಸೆ.03

ರಾಯಚೂರು ಜಿಲ್ಲೆಯ ವಕ್ರಾಣಿ ಹಾಗೂ ವಿಜಯಪುರ ಜಿಲ್ಲೆಯ ಮುತ್ತಗಿ ಗ್ರಾಮಗಳಲ್ಲಿ ದಲಿತ ಸಮುದಾಯದ ಯುವತಿಯರ ಮೇಲೆ ನಡೆದಿರುವ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣಗಳನ್ನು ಖಂಡಿಸಿ, ಆರೋಪಿಗಳನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಹಾಗೂ ನೊಂದ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಮಾದಿಗ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಬುಧವಾರ ನಗರದಲ್ಲಿ ಪ್ರತಿಭಟನೆ ನಡೆಯಿತು.

ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿ, ದಲಿತ ಸಮುದಾಯದ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪಿಗಳನ್ನು ಯಾವುದೇ ವಿಳಂಬವಿಲ್ಲದೆ ಬಂಧಿಸಿ, ಕಾನೂನುಬದ್ಧವಾಗಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಿದರು.

ದಲಿತ ಸಮುದಾಯದ ಮೇಲೆ ನಿರಂತರವಾಗಿ ನಡೆಯುತ್ತಿರುವ ದೌರ್ಜನ್ಯ, ಕೊಲೆ ಹಾಗೂ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ಸರಕಾರ ಗಂಭೀರವಾಗಿ ಪರಿಗಣಿಸಬೇಕು. ಇಂತಹ ಘಟನೆಗಳಿಗೆ ಕಡಿವಾಣ ಹಾಕಲು ಕಠಿಣ ಕಾನೂನು ಕ್ರಮ ಕೈಗೊಳ್ಳುವುದರ ಜೊತೆಗೆ, ಪ್ರಕರಣಗಳ ತನಿಖೆಯನ್ನು ತ್ವರಿತಗೊಳಿಸಿ ತಪ್ಪಿತಸ್ಥರಿಗೆ ಶೀಘ್ರ ನ್ಯಾಯಾಲಯದ ಮೂಲಕ ಶಿಕ್ಷೆ ಖಚಿತಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ದೌರ್ಜನ್ಯಕ್ಕೊಳಗಾದ ಕುಟುಂಬಗಳಿಗೆ ಸರಕಾರದಿಂದ ಸೂಕ್ತ ಪರಿಹಾರ, ಅಗತ್ಯ ಭದ್ರತೆ ಹಾಗೂ ಪುನರ್ವಸತಿ ಸೇರಿದಂತೆ ಎಲ್ಲ ರೀತಿಯ ನೆರವು ಒದಗಿಸಬೇಕು. ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ದೊರೆಯುವವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಮುಖಂಡ ದಶರಥ ಕಲಗುರ್ತಿ, ಮಾದರ ಚನ್ನಯ್ಯ ಸೇವಾ ಸಮಿತಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ಜಿನಕೇರಿ, ರಾಜು ಕಟ್ಟಿಮನಿ, ರಮೇಶ ವಾಡೇಕರ್, ರಂಜಿತಕುಮಾರ ಮೂಲಿಮನಿ, ಬಂಡೇಶ ರತ್ನಡಗಿ ಸೇರಿದಂತೆ ಮಾದಿಗ ಸಂಘಟನೆಗಳ ವಿವಿಧ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಕಲಬುರಗಿಯನ್ನು ಬರಪೀಡಿತ ಜಿಲ್ಲೆ ಘೋಷಿಸಲು ಆಗ್ರಹಿಸಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ

ಕಲಬುರಗಿ,ಸೆ.03-

ಜಿಲ್ಲೆಯಲ್ಲಿ ಶೇ.50ಕ್ಕಿಂತ ಕಡಿಮೆ ಮಳೆಯಾಗಿ ಬಹುತೇಕ ಬೆಳೆಗಳು ಹಾನಿಗೀಡಾಗಿರುವ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆಯನ್ನು ತಕ್ಷಣ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಎಂದು ಆಗ್ರಹಿಸಿ ಬಿಜೆಪಿ ವತಿಯಿಂದ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ತೀವ್ರವಾಗಿ ಹಿನ್ನಡೆ ಕಂಡಿದ್ದು, ರೈತರು ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ನೆರವಿಗೆ ಧಾವಿಸಿ ಕಲಬುರಗಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್ ಸರ್ಕಾರ ರೈತರ ಸಂಕಷ್ಟವನ್ನು ಕಡೆಗಣಿಸಿದ್ದು, ಮಳೆ ಕೊರತೆ ಹಾಗೂ ಬೆಳೆ ಹಾನಿಯ ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸದೆ ಕಲಬುರಗಿಯನ್ನು ಬರಪೀಡಿತ ಜಿಲ್ಲೆಗಳ ಪಟ್ಟಿಯಿಂದ ಕೈಬಿಟ್ಟಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರತಿಭಟನೆಯ ವೇಳೆ ರಸ್ತೆಯಲ್ಲಿ ಸಂಚರಿಸುತ್ತಿದ್ದ ಬಸ್, ಕಾರು ಹಾಗೂ ಆಟೋಗಳನ್ನು ಪ್ರತಿಭಟನಾಕಾರರು ತಡೆದು ಆಕ್ರೋಶ ವ್ಯಕ್ತಪಡಿಸಿದ ಪರಿಣಾಮ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಸೇಡಂ ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೇಲ್ಕೂರ ಮಾತನಾಡಿ, ಸಚಿವ ಸ್ಥಾನ ನೀಡುವ ಸಂದರ್ಭದಲ್ಲಿ ಮೊದಲ ಸುತ್ತಿನಲ್ಲಿ ಅವಕಾಶ ನೀಡಿದಂತೆ, ಕಲಬುರಗಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸುವ ವಿಚಾರದಲ್ಲಿಯೂ ಮೊದಲ ಹಂತದಲ್ಲೇ ಪರಿಗಣಿಸಬೇಕಿತ್ತು ಎಂದು ಸರ್ಕಾರವನ್ನು ಟೀಕಿಸಿದರು.



ಜಿಲ್ಲೆಯ ರೈತರು ತೀವ್ರ ಸಂಕಷ್ಟದಲ್ಲಿದ್ದು, ಕೂಡಲೇ ಬರ ಘೋಷಿಸಿ ರೈತರಿಗೆ ಬೆಳೆ ಪರಿಹಾರ ಸೇರಿದಂತೆ ಅಗತ್ಯ ನೆರವು ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ಪ್ರತಿಭಟನೆ ವೇಳೆ ಬೈಕ್ ಸವಾರರು ಪ್ರತಿಭಟನಾ ಸ್ಥಳದ ಮೂಲಕ ತೆರಳಲು ಮುಂದಾದಾಗ ಸೇಡಂ ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೇಲ್ಕೂರ ಅವರು ಬೈಕ್ ತಡೆದು ಸವಾರನ ಹೆಲ್ಮೆಟ್ ಅನ್ನು ನೆಲಕ್ಕೆ ಒಡೆದಿರುವ ಘಟನೆ ನಡೆದಿದೆ. ಸ್ಥಳದಲ್ಲಿದ್ದ ಪೊಲೀಸರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು.

ಈ ಘಟನೆಯಿಂದ ಕೆಲಕಾಲ ಪ್ರತಿಭಟನಾ ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು.

ಪ್ರತಿಭಟನೆಯಲ್ಲಿ ಬಿಜೆಪಿ ಶಾಸಕರಾದ ಬಸವರಾಜ ಮತ್ತಿಮಡು, ಅವಿನಾಶ್ ಜಾಧವ್, ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ಚಂದು ಪಾಟೀಲ್, ಮಾಜಿ ಸಂಸದ ಉಮೇಶ್ ಜಾಧವ್, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ, ನಿತಿನ್ ಗುತ್ತೇದಾರ್, ವಿಶಾಲ ದರ್ಗಿ, ಅವ್ವಣ್ಣ ಮ್ಯಾಕೇರಿ, ಸಂತೋಷ್ ಹಾದಿಮನಿ, ಮಹಾದೇವ ಬೆಳಮಗಿ, ಸುಧಾ ಹಾಲಕಾಯಿ, ಶರಣಪ್ಪ ತಳವಾರ, ಸಚಿನ್ ಕಟ್ಟಿಮನಿ ಸೇರಿದಂತೆ ಹಲವು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಲಾರಿ ಆಟೋ ಮುಖಾಮುಖಿ ಢಿಕ್ಕಿ: ತಾಯಿ, ಮಗು ಮೃತ್ಯು

ವಾಡಿ:

ಲಾರಿ ಹಾಗೂ ಆಟೋ ನಡುವೆ ಮುಖಾಮುಖಿ ಢಿಕ್ಕಿ ಸಂಭವಿಸಿ ತಾಯಿ ಹಾಗೂ ಮೂರು ತಿಂಗಳ ಮಗು ಮೃತಪಟ್ಟ ಘಟನೆ ಲಾಡ್ಲಾಪುರ ಹಲಕರ್ಟಿ ನಡುವಿನ ರಾಷ್ಟ್ರೀಯ ಹೆದ್ದಾರಿ 150ರಲ್ಲಿ ಬುಧವಾರ ಸಂಜೆ ನಡೆದಿದೆ.

ವಾಡಿ ಪಟ್ಟಣದ ಕಲ್ಕಂ ಏರಿಯಾ ನಿವಾಸಿ ಶರಣಮ್ಮ ಶರಣು ಸಿಂಗೆ (30) ಹಾಗೂ ಅವರ ಮೂರು ತಿಂಗಳ ಮಗು ರಾಘವೇಂದ್ರ ಶರಣು ಸಿಂಗೆ ಮೃತಪಟ್ಟಿದ್ದಾರೆ.

ಅಪಘಾತದಲ್ಲಿ ಸಾಬಮ್ಮ ಸಿಂಗೆ (50) ಹಾಗೂ ಆಟೋ ಚಾಲಕ ಖಾಜಾ ಪಟೇಲ್ ಭಾಷಾ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ವಾಡಿ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆ ಗಾಗಿ ಕಲಬುರಗಿ ಜಿಲ್ಲಾ ಆಸ್ಪತ್ರೆಗೆ ಕಳುಹಿಸಲಾಗಿದೆ.

ಘಟನೆಯ ಮಾಹಿತಿ ತಿಳಿದು ವಾಡಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

ಒಂದನೇಯ ಪುಟದಿಂದ

ದಲಿತ ಮಹಿಳೆಯರಿಗೆ ರಕ್ಷಣೆ ನೀಡಲು ಸರ್ಕಾರ ವಿಫಲ; ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹ

ಪ್ರತಿಭಟನಾಕಾರರು ಮಾತನಾಡಿ, ಜಾತಿ ಪ್ರಭಾವ, ರಾಜಕೀಯ ಒತ್ತಡ ಅಥವಾ ಪ್ರಭಾವಿ ವ್ಯಕ್ತಿಗಳ ಹಸ್ತಕ್ಷೇಪದಿಂದ ಸಂತ್ರಸ್ತರಿಗೆ ನ್ಯಾಯ ವಿಳಂಬವಾಗಬಾರದು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನಿನಡಿ ಕಠಿಣ ಕ್ರಮ ಕೈಗೊಳ್ಳಬೇಕು. ಪ್ರಕರಣಗಳಲ್ಲಿ ಆರೋಪಿಗಳು ಶಿಕ್ಷೆಯಿಂದ ತಪ್ಪಿಸಿಕೊಳ್ಳುತ್ತಿರುವ ಭಾವನೆ ಮೂಡಿದರೆ ಇಂತಹ ಘಟನೆಗಳು ಮರುಕಳಿಸುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಭೂಮಾನಂದ ಕುಟುಂಬಕ್ಕೂ ನ್ಯಾಯಕ್ಕೆ ಆಗ್ರಹ ದೇವದುರ್ಗ ತಾಲೂಕಿನ ಹದಿನಾಳ ಗ್ರಾಮದ ಬಿಎಸ್‌ಪಿ ಜಿಲ್ಲಾ ಅಧ್ಯಕ್ಷ ಭೂಮಾನಂದರ್ ಅವರ ಕೊಲೆ ಪ್ರಕರಣವನ್ನೂ ಪ್ರಸ್ತಾಪಿಸಿದ ಪ್ರತಿಭಟನಾಕಾರರು, ಪ್ರಕರಣದ ಆರೋಪಿಗಳನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಲಿಂಗಸುಗೂರು ವ್ಯಾಪ್ತಿಯ ರಾಣೆಮ್ಮ ಸಾವಿನ ಪ್ರಕರಣವನ್ನೂ ಗಂಭೀರವಾಗಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪ್ರಮುಖ ಬೇಡಿಕೆಗಳು: ಅಶ್ವಿನಿ ಹಾಗೂ ರಾಣೆಮ್ಮ ಕುಟುಂಬಗಳಿಗೆ ತಲಾ ₹50 ಲಕ್ಷ ಪರಿಹಾರ ನೀಡಬೇಕು. ಸಂತ್ರಸ್ತ ಕುಟುಂಬದ ಅರ್ಹ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸಬೇಕು. ಭೂಮಾನಂದರ್ ಕುಟುಂಬಕ್ಕೆ ₹50 ಲಕ್ಷ ಪರಿಹಾರ, ಪತ್ನಿಗೆ ಸರ್ಕಾರಿ ನೌಕರಿ ಹಾಗೂ ಮಕ್ಕಳಿಗೆ ಉಚಿತ ಉತ್ತಮ ಶಿಕ್ಷಣ ನೀಡಬೇಕು. ಅಶ್ವಿನಿ ಹತ್ಯೆ ಪ್ರಕರಣದ ಆರೋಪಿಗಳನ್ನು ತಕ್ಷಣ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ದಲಿತ ಯುವತಿಯರು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಿಗೆ ತ್ವರಿತ ತನಿಖೆ ಮತ್ತು ನ್ಯಾಯ ಒದಗಿಸಬೇಕು. ಪ್ರತಿ ತಿಂಗಳು ಜಿಲ್ಲಾಧಿಕಾರಿ ಕಚೇರಿಯಲ್ಲಿ ಪರಿಶಿಷ್ಟ ಜಾತಿಪರಿಶಿಷ್ಟ ಪಂಗಡದವರ ಕುಂದುಕೊರತೆ ಸಭೆ ಕಡ್ಡಾಯವಾಗಿ ನಡೆಸಬೇಕು. ಎಸ್‌ಸಿ-ಎಸ್‌ಟಿ ಸಮುದಾಯದ ಹಕ್ಕುಗಳು, ಭದ್ರತೆ ಮತ್ತು ಕಾನೂನು ರಕ್ಷಣೆಯ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಎಸ್‌ಸಿ/ಎಸ್‌ಪಿ ಹಾಗೂ ಟಿಎಸ್‌ಪಿ ಅನುದಾನವನ್ನು ದಲಿತರು ಮತ್ತು ಆದಿವಾಸಿಗಳ ಅಭಿವೃದ್ಧಿಗೆ ಸಂಪೂರ್ಣವಾಗಿ ಬಳಸಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟರು.

ಸರ್ಕಾರ ಕೂಡಲೇ ಬೇಡಿಕೆಗಳನ್ನು ಈಡೇರಿಸಿ ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಒದಗಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಪ್ರತಿಭಟನಾಕಾರರು ಎಚ್ಚರಿಸಿದರು.

ವಸತಿ ನಿಲಯದಲ್ಲಿ ಆಹಾರ ದೋಷದಿಂದ ಅಸ್ವಸ್ಥರಾದ ವಿದ್ಯಾರ್ಥಿಗಳ ಆರೋಗ್ಯವನ್ನು ವಿಚಾರಿಸಿದ ಬೋಸರಾಜು

ವಿದ್ಯಾರ್ಥಿಗಳನ್ನು ರಿಮ್ಸ್ ಅಸ್ಪತ್ರೆಗೆ ಕಳುಹಿಸಲಾಗಿದು ಪ್ರಸ್ತುತ 12 ವಿದ್ಯಾರ್ಥಿಗಳು ಪಟ್ಟಣದ ಸರಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ದಾಖಲಿಸಿಕೊಂಡು ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಶಾಸಕ ಹಂಪಯ್ಯ ನಾಯಕ ವಿದ್ಯಾರ್ಥಿಗಳಿಂದ ಮಾಹಿತಿ ಪಡೆದುಕೊಂಡರು .

ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರ ಶೇಖರ.ಡಿ. ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕರಾದ ಭಾಗಯ್ಯನಾಯಕ, ಮುರಾರ್ಜಿ ದೇಸಾಯಿ ಅಲ್ಪ ಸಂಖ್ಯಾತರ ವಸತಿ ಸಹಿತ ಶಾಲೆಯ ಪ್ರಾಚಾರ್ಯರಾದ ವೆಂಕಟೇಶನಾಯಕ. ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ ,ಕಿರಿಲಿಂಗಪ್ಪ, ರಾಜಾಸುಭಾಷ್ಚಂದ್ರನಾಯಕ ಸೇರಿದಂತೆ ಆಸ್ಪತ್ರೆಯ ವೈದ್ಯರು ಹಾಗೂ ಇನ್ನಿತರರು ಇದ್ದರು.

ಬೆದರಿಕೆ ಆರೋಪಕ್ಕೆ ದಾಖಲೆ ತೋರಿಸಿ: ಭೀಮಣ್ಣ ಮಂಚಾಲ ಸವಾಲು

ಸಮುದಾಯವನ್ನು ವಿಭಜಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಭೀಮಣ್ಣ ಮಂಚಾಲ ಆರೋಪಿಸಿದರು.

ಸಮುದಾಯದ ಗಂಭೀರ ವಿಚಾರಗಳ ಕುರಿತು ಮಾತನಾಡುವಾಗ ಜವಾಬ್ದಾರಿಯಿಂದ ಹೇಳಿಕೆ ನೀಡಬೇಕು. ಆಧಾರವಿಲ್ಲದೆ ಆರೋಪ ಮಾಡುವುದನ್ನು ಇನ್ನು ಮುಂದೆ ಸಹಿಸುವುದಿಲ್ಲ ಎಂದು ಅವರು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕೆ.ಇ. ಕುಮಾರ್ ಬಸವರಾಜ್, ಶಶಿಧರ್, ವಿಜಯ್, ವೀರೇಶ್, ಪಂಪಣ್ಣ, ಪ್ರಾಣೇಶ್ ಮಂಚಾಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರೈತರ ಸಮಸ್ಯೆ ಚರ್ಚಿಸಲು ವಿಶೇಷ ಅಧಿವೇಶನ ಕರೆಯಿರಿ :ಸರ್ಕಾರಕ್ಕೆ ವಿಜಯೇಂದ್ರ ಒತ್ತಾಯ

ಎಂದು ಒತ್ತಾಯಿಸಿದರು.

ಜೋಳದ ಬೆಂಬಲ ಬೆಲೆಯ ಸುಮಾರು 145 ಕೋಟಿ ಬಾಕಿ ಇದ್ದು, ಅದನ್ನು ಕೂಡಲೇ ರೈತರಿಗೆ ಪಾವತಿಸಬೇಕು. ಹೈನುಗಾರರಿಗೆ ನೀಡಬೇಕಾದ ಪ್ರೋತ್ಸಾ ಹಧನವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಹಾಲು ಉತ್ಪಾದಕರಿಗೆ ಪ್ರೋತ್ಸಾ ಹಧನ ನೀಡಲಾಗುತ್ತಿತ್ತು. ಈಗ ಆ ಪ್ರೋತ್ಸಾ ಹಧನ ಕೂಡ ಬಿಡುಗಡೆಯಾಗುತ್ತಿಲ್ಲ. ರೈತರ ಬದುಕಿನೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿದರು.

ನಾಡಿನ ರೈತರ ಸಮಸ್ಯೆಗಳ ಕುರಿತು ಸಮಗ್ರವಾಗಿ ಚರ್ಚಿಸಲು ರಾಜ್ಯ ಸರ್ಕಾರ ವಿಶೇಷ ಅಧಿವೇಶನವನ್ನು ಕರೆಯಬೇಕು. ಹೊಸಪೇಟೆ ಡ್ಯಾಂನಲ್ಲಿ ಹೂಳೆತ್ತುವ ಕಾರ್ಯ ಕೈಗೊಳ್ಳಬೇಕು. 31 ಟಿಎಂಸಿ ನೀರನ್ನು ಹಿಡಿದಿಟ್ಟುಕೊಳ್ಳುವ ಉದ್ದೇಶದಿಂದ ಸಮಾನಾಂತರ ಹಂಚಿಕೆ ವ್ಯವಸ್ಥೆಗೆ ನವಲೆ ಜಲಾಶಯಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಿಯಲ್ ಎಸ್ಟೇಟ್ ವಿಚಾರಗಳ ಬಗ್ಗೆ ಹೆಚ್ಚು ಗಮನ ಹರಿಸುತ್ತಿದ್ದಾರೆ ಎಂದು ಟೀಕಿಸಿದ ವಿಜಯೇಂದ್ರ, ಈಗಲಾದರೂ ಕನಿಷ್ಠ ಶೇ.25ರಷ್ಟು ಗಮನವನ್ನು ಅನ್ನದಾತನ ಸಮಸ್ಯೆಗಳ ಕಡೆಗೆ ಹರಿಸಿ ಎಂದು ಹೇಳಿದರು. ಮುಖ್ಯಮಂತ್ರಿಗಳೇ, ರೈತರ ಸಮಸ್ಯೆಗಳ ಬಗ್ಗೆ ಗಮನಹರಿಸಿ ರಾಜ್ಯದ ರೈತರು ಸಂಕಷ್ಟದಲ್ಲಿದ್ದಾರೆ. ಅವರ ಸಮಸ್ಯೆಗಳಿಗೆ ಪರಿಹಾರ ನೀಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು ಎಂದರು.

ಬಿಜೆಪಿ ಪಾದಯಾತ್ರೆ ಸಾಗುವ ಮಾರ್ಗದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಕಪ್ಪು ಬಾವುಟ ಪ್ರದರ್ಶಿಸಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಆರ್.ಬಿ. ಹರಿಪ್ರಸಾದ್ ಕರೆ ನೀಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಪಾದಯಾತ್ರೆಯನ್ನು ತಡೆಯುವುದಾದರೆ ತಡೆಯಿರಿ. ನಮನ್ನು ಗಲ್ಲಿಗೇರಿಸಿದರೂ ಪರವಾಗಿಲ್ಲ. ಆದರೆ ಮೊದಲು ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಎಂದು ತಿರುಗೇಟು ನೀಡಿದರು.

ಶೇ 5ರಷ್ಟು ಉದ್ಯಾನದ ಜಮೀನು ಬಳಸುವ ವಿವಾದಿತ ಮಸೂದೆ ಹಿಂಪಡೆಯಲು ಸಂಪುಟ ಸಭೆ ತೀರ್ಮಾನ

ಮತ್ತು ಸ್ಥಳೀಯ ರೈತ ಸಮುದಾಯಕ್ಕೆ ನೇರವಾಗಿ ಪ್ರಯೋಜನಕಾರಿಯಾಗುವ ಕೃಷಿ - ಆಧಾರಿತ ಕೈಗಾರಿಕೆಗಳನ್ನು ಒಳಗೊಂಡಿರಲಿದೆ ಹಾಗೂ ಇದಕ್ಕೆ ಸಾರ್ವಜನಿಕ ಹಿತಾಸಕ್ತಿ ಮತ್ತು ಅತ್ಯಗತ್ಯತೆಯನ್ನು ನಿರೂಪಿಸುವ ದಾಖಲಿತ ಕಾರಣಗಳು ಇರಬೇಕು ಎಂಬ ಅಂಶವನ್ನು ವಿಧೇಯಕದಲ್ಲಿ ಸೇರ್ಪಡೆಗೊಳಿಸಲಾಗಿತ್ತು.

ಸೆ.21, 22 ಮತ್ತು 23ರಂದು ವಿಶೇಷ ಅಧಿವೇಶನ: ಸೆ.21, ಸೆ.22 ಮತ್ತು ಸೆ.23ರಂದು ಮೂರು ದಿನಗಳ ಕಾಲ ವಿಧಾನ ಮಂಡಲ ವಿಶೇಷ ಅಧಿವೇಶನ ನಡೆಸಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ. ರಾಜ್ಯದಲ್ಲಿ ಎದುರಾಗಿರುವ ಬರಗಾಲದ ಬಗ್ಗೆ ವಿಸ್ತೃತವಾಗಿ ಚರ್ಚೆ ನಡೆಯಲಿದೆ. ರಾಜ್ಯದಲ್ಲಿ ಅನೇಕ ಜ್ವಲಂತ ಸಮಸ್ಯೆಗಳು ಇವೆ. ಈ ವರ್ಷ ಭೀಕರ ಬರಗಾಲ ಇದೆ. ಅದರ ಪರಿಣಾಮಗಳು, ಬರ ತಾಲೂಕುಗಳು, ಸರ್ಕಾರ ತೆಗೆದುಕೊಂಡ ಕ್ರಮಗಳು, ಕೇಂದ್ರದಿಂದ ಕೋರುತ್ತಿರುವ ಪರಿಹಾರ, ಮಳೆ ಕೊರತೆ, ಕುಡಿಯುವ ನೀರಿನ ನಿರ್ವಹಣೆ, ಬೆಳೆ ನಷ್ಟ, ಮೇವು ಪೂರೈಕೆ, ರೈತರಿಗೆ ಬರ ಪರಿಹಾರ ನೀಡುವ ಸಂಬಂಧ ವ್ಯಾಪಕವಾಗಿ ಚರ್ಚಿಸಲು ತೀರ್ಮಾನಿಸಲಾಗಿದೆ ಎಂದರು.

ಇದರ ಜೊತೆಗೆ ಡಾ.ಕೆ.ಕಸ್ತೂರಿ ರಂಗನ್ ಉನ್ನತ ಮಟ್ಟದ ತಂಡ ನೀಡಿರುವ ವರದಿಯನ್ನು ಆಧಾರಿಸಿ ಕೇಂದ್ರ ಸರ್ಕಾರ ಹೊರಡಿಸಿರುವ ಕರಡು ಅಧಿಸೂಚನೆ ಸಂಬಂಧ ವಿಶೇಷ ಚರ್ಚೆ ನಡೆಯಲಿದೆ. ಕೇಂದ್ರ ಸರ್ಕಾರ ಹೊರಡಿಸಿರುವ ಕರಡು ಅಧಿಸೂಚನೆ ವಿರುದ್ಧ ಸಮಗ್ರವಾಗಿ ಚರ್ಚಿಸಲಾಗುವುದು ಎಂದು ಡಿಸಿಎಂ ಜಿ.ಪರಮೇಶ್ವರ್ ತಿಳಿಸಿದರು.

ರಾಜಕೀಯ ವ್ಯವಹಾರಗಳ ಸಚಿವರ ಸಮಿತಿ ರಚನೆ: ಸಚಿವ ಸಂಪುಟ ಸಭೆಯಲ್ಲಿ ಗ್ರೂಪ್ ಆಫ್ ಸಚಿವರ ಕಮಿಟಿ ರಚನೆ ಮಾಡಲು ತೀರ್ಮಾನಿಸಲಾಗಿದೆ. ಮಹತ್ವದ ತೀರ್ಮಾನ ಕೈಗೊಳ್ಳುವ ಮೊದಲು, ಆ ವಿಷಯಗಳು ಸಂಪುಟ ಸಭೆಗೆ ಬರುವ ಮುನ್ನ ಚರ್ಚಿಸಿ ಪರಿಶೀಲಿಸಲು ಸಚಿವರ ಸಮಿತಿ ರಚಿಸಲಾಗಿದೆ. ರಾಜಕೀಯ ವ್ಯವಹಾರಗಳ ಸಚಿವ ಸಮಿತಿಗೆ ಸಿಎಂ ಅಧ್ಯಕ್ಷರಾಗಿರಲಿದ್ದಾರೆ. ಉಳಿದಂತೆ ಇದರಲ್ಲಿ ಡಿಸಿಎಂ ಜಿ.ಪರಮೇಶ್ವರ್, ಕೆ.ಹೆಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಪ್ರಿಯಾಂಕ ಖರ್ಗೆ, ಕೃಷ್ಣ ಬೈರೇಗೌಡ, ಯತೀಂದ್ರ, ಯು.ಟಿ.ಖಾದರ್, ಲಕ್ಷ್ಮಣ್ ಸವದಿ, ಸತೀಶ್ ಜಾರಕಿಹೊಳಿ, ಎಂ.ಬಿ.ಪಾಟೀಲ್ ಸೇರಿ 10 ಸಚಿವರು ಇರಲಿದ್ದಾರೆ.

ಸರ್ಕಾರದ ವಕ್ತಾರರಾಗಿ ಸಚಿವರ ನೇಮಕ: ಸಚಿವ ಸಂಪುಟ ಸಭೆಯಲ್ಲಿ ಸರ್ಕಾರದ ವಕ್ತಾರರನ್ನಾಗಿ ಎಂಟು ಸಚಿವರುಗಳನ್ನು ನೇಮಕ ಮಾಡಲು ತೀರ್ಮಾನಿಸಲಾಗಿದೆ. ಇವರು ಹೇಳಿಕೆ ಕೊಟ್ಟರೆ ಮಾತ್ರ ಅಧಿಕೃತವಾಗಿರಲಿದೆ. ಇವರು ಸರ್ಕಾರದ ಅಧಿಕೃತ ವಕ್ತಾರರಾಗಿರಲಿದ್ದಾರೆ. ಡಿಸಿಎಂ ಜಿ.ಪರಮೇಶ್ವರ್, ಕೃಷ್ಣ ಬೈರೇಗೌಡ, ಪ್ರಿಯಾಂಕ ಖರ್ಗೆ, ಸಂತೋಷ್ ಲಾಡ್, ಯು.ಟಿ.ಖಾದರ್, ಈಶ್ವರ್ ಖಂಡ್ರೆ, ಹೆಚ್.ಸಿ.ಬಾಲಕೃಷ್ಣ, ಲಕ್ಷ್ಮಣ್ ಸವದಿ ಸರ್ಕಾರದ ಅಧಿಕೃತ ವಕ್ತಾರರು ಎಂದು ವಿವರಿಸಿದರು.

ಜಾಗತಿಕ ಹೂಡಿಕೆ ಮತ್ತು ವಿದೇಶಾಂಗ ವ್ಯವಹಾರಗಳ ಇಲಾಖೆ ರಚನೆ: ರಾಜ್ಯದಲ್ಲಿ ಹೊಸದಾಗಿ 'ಜಾಗತಿಕ ಹೂಡಿಕೆ ಮತ್ತು ವಿದೇಶಾಂಗ ವ್ಯವಹಾರಗಳ ಇಲಾಖೆ ರಚನೆಗೆ ತೀರ್ಮಾನ ಮಾಡಲಾಗಿದೆ. ಇದರಲ್ಲಿ ವಿದೇಶಾಂಗ ಪದ ಬದಲಾಗಬಹುದು. ಸಾಗರೋತ್ತರ ವ್ಯವಹಾರ ಇಲಾಖೆ ಎಂದು ಬದಲಾಯಿಸಬಹುದು ಎಂಬ ಸಲಹೆ ಬಂದಿದೆ ಎಂದು ಇದೇ ವೇಳೆ ಡಿಸಿಎಂ ಜಿ.ಪರಮೇಶ್ವರ್ ತಿಳಿಸಿದರು.

ಈ ಇಲಾಖೆ ಸಿಂಗಲ್ ವಿಂಡೋ ವ್ಯವಸ್ಥೆ, ಎನ್‌ಆರ್ ಐ ಕಾರ್ಡು ವಿತರಣೆ ಮಾಡಲಿದೆ. ವಿದೇಶಿ ನಿಯೋಗಗಳಿಗೆ ಸತ್ಕಾರ ಮಾಡುವುದು, ಪಾಲುದಾರಿಕೆ, ಸಹಯೋಗ, ಹೂಡಿಕೆ ನಿರೀಕ್ಷೆ ಇಟ್ಟುಕೊಂಡು ಬರುವ ವಿದೇಶಿಗರನ್ನು ಸಿಎಂ ಜೊತೆ ಭೇಟಿ ಮಾಡಿಸಿ, ಅವರ ಪ್ರಸ್ತಾವನೆಗಳನ್ನು ಸ್ವೀಕಾರ ಮಾಡಿ ಅವುಗಳನ್ನು ಆಡಳಿತಾತ್ಮಕ ಇಲಾಖೆಗಳಿಗೆ ಕಳುಹಿಸಿಕೊಡುವ ಕೆಲಸ ಮಾಡಲಿದೆ. ವಿದೇಶಿ ಹೂಡಿಕೆದಾರರು ಕಾಯುವುದನ್ನು ತಪ್ಪಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದರು.

ಡಾ.ಅಪ್ಪಾಜಿಯವರ ಶಿಕ್ಷಣ ಸೇವೆ ಸದಾ ಸ್ಮರಣೀಯ: ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು



ಕಲಬುರಗಿ,ಸೆ.03-

ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿಗಳಾಗಿದ್ದ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಪ್ರಥಮ ಪುಣ್ಯಸ್ಮರಣೋತ್ಸವದ ಅಂಗವಾಗಿ ಬುಧವಾರ ನಗರದ ಶ್ರೀ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಕಾರ್ಯಕ್ರಮದಲ್ಲಿ ಭಾವಪೂರ್ಣ ನುಡಿನಮನ ಸಲ್ಲಿಸಲಾಯಿತು.

ನಗರದ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿರುವ ಡಾ. ಶರಣಬಸವಪ್ಪ ಅಪ್ಪ ಅನುಭವ ಮಂಟಪವನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಶಿಕ್ಷಣ, ಸಾಮಾಜಿಕ ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಪೂಜ್ಯ ಅಪ್ಪಾಜಿಯವರಿಗೆ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ದಾವಣಗೆರೆ ಲೋಕಸಭಾ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು ಅವರು, ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ ರಚಿಸಿರುವ ಮಹಾಮಾನವ ಭಾಗ-1, ಡಾ. ಎನ್.ಎಸ್. ಪಾಟೀಲ ರಚಿಸಿರುವ ಡಾ. ಅಪ್ಪಾಜಿಯವರ ಜೀವನ ಚರಿತ್ರೆ, ದಾಸೋಹಮೂರ್ತಿ ವಿದ್ಯಾಭಂಡಾರಿ ಹಾಗೂ ಇಂಗ್ಲಿಷ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಪ್ರಕಾಶ ನೆಲ್ಲಗಿ ಸಿದ್ದಪಡಿಸಿರುವ ಡಾ. ಅಪ್ಪಾಜಿಯವರು ಪ್ರತಿಪಾದಿಸಿದ 16 ದಾಸೋಹ ಸೂತ್ರಗಳನ್ನು ಪರಿಚಯಿಸುವ ವಿಡಿಯೋಗಳ ಸಮೂಹವನ್ನು ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು ಅವರು, ಡಾ. ಶರಣಬಸವಪ್ಪ ಅಪ್ಪಾಜಿಯವರು ಶಿಕ್ಷಣ ಮತ್ತು ಮಹಿಳಾ ಸಬಲೀಕರಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಐತಿಹಾಸಿಕ ಹಾಗೂ ಅಪೂರ್ವವಾದದ್ದು ಎಂದು ಬಣ್ಣಿಸಿದರು.

ಹಿಂದುಳಿದ ಪ್ರದೇಶದ ಶೈಕ್ಷಣಿಕ ಸಬಲೀಕರಣಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಅಪ್ಪಾಜಿಯವರು ಕಲಬುರಗಿಯನ್ನು ಪ್ರಮುಖ ಶೈಕ್ಷಣಿಕ ಕೇಂದ್ರವನ್ನಾಗಿ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಗುಣಮಟ್ಟದ ಶಿಕ್ಷಣವನ್ನು ವಿಸ್ತರಿಸುವುದರ ಜೊತೆಗೆ ಮಹಿಳೆಯರಿಗೆ ಹೆಚ್ಚಿನ ಶೈಕ್ಷಣಿಕ ಅವಕಾಶಗಳನ್ನು ಕಲ್ಪಿಸುವಲ್ಲಿ ಅವರ ಕೊಡುಗೆಗೆ ಸರಿಸಾಟಿಯಿಲ್ಲ ಎಂದು ಹೇಳಿದರು.

ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ ಅವರು ಮಾತನಾಡಿ, ತಮ್ಮ ತಂದೆ ಡಾ. ಶರಣಬಸವಪ್ಪ ಅಪ್ಪಾಜಿಯವರೊಂದಿಗಿನ ಆತ್ಮೀಯ ಬಾಂಧವ್ಯ ಹಾಗೂ ಪ್ರತಿದಿನ ಹಂಚಿಕೊಂಡ ಪ್ರೀತಿ, ಸಂತೋಷದ ಕ್ಷಣಗಳನ್ನು ಭಾವುಕರಾಗಿ ಸ್ಮರಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಮಾತನಾಡಿ, ಅಪ್ಪಾಜಿಯವರ ಪ್ರಥಮ ಪುಣ್ಯಸ್ಮರಣೋತ್ಸವದಲ್ಲಿ ಸಮಾಜದ ಎಲ್ಲ ವರ್ಗಗಳ ಜನರು ಪಾಲ್ಗೊಂಡಿರುವುದು ಅವರ ಮೇಲಿನ ಜನರ ಅಪಾರ ಪ್ರೀತಿ ಮತ್ತು ಅಭಿಮಾನಕ್ಕೆ ಸಾಕ್ಷಿಯಾಗಿದೆ ಎಂದರು.

ಸಾಮಾನ್ಯ ಜನರು, ಅದರಲ್ಲೂ ವಿಶೇಷವಾಗಿ ಮಹಿಳೆಯರ ಶೈಕ್ಷಣಿಕ ಸಬಲೀಕರಣಕ್ಕಾಗಿ ಡಾ. ಅಪ್ಪಾಜಿಯವರು ಸಲ್ಲಿಸಿರುವ ಕೊಡುಗೆಯನ್ನು ಸಮಾಜ ಸದಾ ಸ್ಮರಿಸಲಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸ್ಮರಣಾರ್ಥ ವಚನ ಟಿವಿ ವತಿಯಿಂದ ನೀಡಲಾಗುವ ಅಂತರರಾಷ್ಟ್ರೀಯ ಪ್ರಶಸ್ತಿಯನ್ನು ಈ ವರ್ಷ ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು ಅವರಿಗೆ ನೀಡಲಾಗುವುದು ಎಂದು ಘೋಷಿಸಿದರು.

ಹಾರಕೂಡ ಸಂಸ್ಥಾನ ಮಠದ ಪೂಜ್ಯ ಡಾ. ಚೆನ್ನವೀರ ಶಿವಾಚಾರ್ಯರು ಮಾತನಾಡಿ, ತಮ್ಮ ಜೀವನದುದ್ದಕ್ಕೂ ಶರಣಬಸವೇಶ್ವರ ಸಂಸ್ಥಾನ ಹಾಗೂ ಪೂಜ್ಯ ಡಾ. ಅಪ್ಪಾಜಿಯವರೊಂದಿಗೆ ಹೊಂದಿದ್ದ ಆತ್ಮೀಯ ಒಡನಾಟವನ್ನು ಸ್ಮರಿಸಿದರು.

9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ ಅವರು ಕೇವಲ 6ನೇ ವಯಸ್ಸಿನಲ್ಲಿಯೇ ಸಂಸ್ಥಾನದ ಪೀಠಾಧಿಪತಿಗಳಾಗಿ ಪಟ್ಟಾಭಿಷಿಕ್ತರಾಗಿದ್ದರು ಎಂದು ಸ್ಮರಿಸಿದ ಅವರು, ತಾವೂ 6ನೇ ವಯಸ್ಸಿನಲ್ಲಿಯೇ ಹಾರಕೂಡ ಸಂಸ್ಥಾನ ಮಠದ ಪೀಠಾಧಿಪತಿಗಳಾಗಿ ಪಟ್ಟಾಭಿಷಿಕ್ತರಾಗಿದ್ದಾಗಿ ತಿಳಿಸಿದರು.

ಆಂಧ್ರಪ್ರದೇಶದ ಶ್ರೀಶೈಲದಲ್ಲಿರುವ ಸಾರಂಗ ಮಠದ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮೀಜಿ ಅವರು ಸಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕಲಬುರಗಿ ಲೋಕಸಭಾ ಸದಸ್ಯ ಡಾ. ರಾಧಾಕೃಷ್ಣ ದೊಡ್ಡಮನಿ, ಮುತ್ಯಾನ ಬಬಲಾದ ಮಠದ ಪೀಠಾಧಿಪತಿ ಡಾ. ಗುರುಪಾದಲಿಂಗ ಮಹಾಶಿವಯೋಗಿಗಳು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಡಾ. ಅಪ್ಪಾಜಿಯವರ ಪುತ್ರಿಯರಾದ ಕುಮಾರಿ ಭವಾನಿ, ಕುಮಾರಿ ಶಿವಾನಿ, ಕುಮಾರಿ ಮಹೇಶ್ವರಿ, ಡಾ. ಗಂಗಾಂಬಿಕಾ ನಿಷ್ಠಿ, ಉಮಾ ಕಾಡಾದಿ, ಡಾ. ಶಾಂತಲಾ ನಿಷ್ಠಿ, ಗೋದಾವರಿ ಭೀಮಳ್ಳಿ, ಡಾ. ವೀರನಾಥ ಮಹಾರಾಜ (ಔಸಾ), ಶ್ರೀ ಆದಿನಾಥ ಮಹಾರಾಜ, ಡಾ. ಅಲ್ಲಮಪ್ರಭು ದೇಶಮುಖ, ವಿಜಯಲಕ್ಷ್ಮೀ ಮುದಗಲ್, ಚಂದ್ರಶೇಖರ ನರಕೆ ಸೇರಿದಂತೆ ಕುಟುಂಬದ ನಿಕಟ ಸದಸ್ಯರನ್ನು ಸನ್ಮಾನಿಸಲಾಯಿತು.

ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಂ.ವೈ. ಪಾಟೀಲ, ಬಿ.ಆರ್. ಪಾಟೀಲ, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಬಿ.ಜಿ. ಪಾಟೀಲ, ಶಶೀಲ ನಮೋಶಿ, ಜಗದೇವ ಗುತ್ತೇದಾರ ಹಾಗೂ ಮಾಜಿ ಶಾಸಕ ಮಾಲಿಕಯ್ಯ ಗುತ್ತೇದಾರ, ದತ್ತಾತ್ರೇಯ ಪಾಟೀಲ ರೇವೂರ, ದೊಡ್ಡಪ್ಪಗೌಡ ನರಿಬೋಳ, ಮಾಜಿ ಸಂಸದ ಉಮೇಶ ಜಾಧವ್ ಸೇರಿದಂತೆ ಹಲವು ಚುನಾಯಿತ ಪ್ರತಿನಿಧಿಗಳನ್ನು ಸನ್ಮಾನಿಸಲಾಯಿತು.

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ 150 ಕ್ಷೇತ್ರಗಳಲ್ಲಿ ಸ್ಪರ್ಧೆ: ಆರ್‌ಎಸ್‌ಪಿ



ಕಲಬುರಗಿ,ಸೆ.03-

ರಾಷ್ಟ್ರೀಯ ಸಮಾಜ ಪಕ್ಷ (ಆರ್‌ಎಸ್‌ಪಿ) ಮುಂದಿನ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ 224 ಕ್ಷೇತ್ರಗಳ ಪೈಕಿ ಕನಿಷ್ಠ 150 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ, ಕನಿಷ್ಠ 10 ಸ್ಥಾನಗಳಲ್ಲಿ ಗೆಲುವು ಸಾಧಿಸುವ ಗುರಿ ಹೊಂದಿದೆ ಎಂದು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಶಿವಲಿಂಗಪ್ಪ ಕಿನ್ನೂರ್ ತಿಳಿಸಿದರು.

ಬೆಂಗಳೂರು ನಗರದ ಗಾಂಧಿಭವನದಲ್ಲಿ ಶನಿವಾರ ನಡೆದ ಆರ್‌ಎಸ್‌ಪಿಯ 23ನೇ ಸಂಸ್ಥಾಪನಾ ದಿನಾಚರಣೆ ಹಾಗೂ ರಾಜ್ಯಮಟ್ಟದ ಕಾರ್ಯಕರ್ತರು ಮತ್ತು ಪದಾಧಿಕಾರಿಗಳ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಆರ್‌ಎಸ್‌ಪಿ ದೇಶದ 17ಕ್ಕೂ ಹೆಚ್ಚು ರಾಜ್ಯಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಬಲವಾದ ಸಂಘಟನಾ ಜಾಲ ಹೊಂದಿದೆ. ಮಹಾರಾಷ್ಟ್ರ ಮತ್ತು ಗುಜರಾತ್‌ನಲ್ಲಿ ಪಕ್ಷದ ಶಾಸಕರು ಹಾಗೂ ಕಾರ್ಪೊರೇಟರ್‌ಗಳು ಆಯ್ಕೆಯಾಗಿರುವುದು ಪಕ್ಷದ ರಾಜಕೀಯ ಪ್ರಭಾವಕ್ಕೆ ಸಾಕ್ಷಿಯಾಗಿದೆ ಎಂದರು.

ಕರ್ನಾಟಕದಲ್ಲಿ ಪಕ್ಷದ ಸಂಘಟನೆಯನ್ನು ಮುಂದಿನ ದಿನಗಳಲ್ಲಿ ಮತ್ತಷ್ಟು ಬಲಪಡಿಸಲಾಗುವುದು. ಮುಂಬರುವ ಜಿಬಿಎ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಮೂಲಕ ಪಕ್ಷವನ್ನು ತಳಮಟ್ಟದಿಂದ ಸಂಘಟಿಸಲಾಗುವುದು ಎಂದು ಹೇಳಿದರು. ಸಮಾವೇಶದ ಸಂದರ್ಭದಲ್ಲಿ ಹಲವು ಯುವಕರು ಹಾಗೂ ಮಹಿಳೆಯರು ಆರ್‌ಎಸ್‌ಪಿ ಸೇರ್ಪಡೆಯಾದರು.

ಮಾಜಿ ರಾಷ್ಟ್ರೀಯ ಅಧ್ಯಕ್ಷ ಸಿದ್ದಪ್ಪ ಲಕ್ಷಣ ಅಕ್ಕಿಸಾಗರ್ ರಾಷ್ಟ್ರೀಯ ಕಾರ್ಯದರ್ಶಿ ಗೋವಿಂದರಾವ್ ಸುನಾರ್ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಶರಣಬಸಪ್ಪ ದೊಡ್ಡಮನಿ, ರಾಜ್ಯ ಉಸ್ತುವಾರಿ ಶಿವಲಿಂಗಪ್ಪ ಜೋಗಿನ್, ಯುವ ಘಟಕದ ರಾಜ್ಯಾಧ್ಯಕ್ಷ ದೇವೇಂದ್ರ ಕ್ಯಾಚಪ್ಪಳ್ಳಿ, ಜಿಲ್ಲಾಧ್ಯಕ್ಷ ಶ್ರೀಮಂತ ಮಾವನೂರ್ ಸುನಿಲ್ ಕಿನ್ನೂರ್ ಮಾಂತು ಅವರಾದ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.



ಬೀದರ್ ಡಿಸಿಸಿ ಬ್ಯಾಂಕ್‌ನಿಂದ ಬಿಎಸ್‌ಎಸ್‌ಕೆ ಕಾರ್ಖಾನೆ ಹರಾಜು ಪ್ರಕ್ರಿಯೆ : ರೈತರಿಂದ ಪ್ರತಿಭಟನೆ

ಬೀದರ್,ಸೆ.03-

ಡಿಸಿಸಿ ಬ್ಯಾಂಕ್‌ನಿಂದ ಬಿಎಸ್‌ಎಸ್‌ಕೆ ಕಾರ್ಖಾನೆ ಹರಾಜು ಪ್ರಕ್ರಿಯೆ ವಿರೋಧಿಸಿ ನಗರದ ಡಿಸಿಸಿ ಬ್ಯಾಂಕ್ ಎದುರು ರೈತರು ಬುಧವಾರ ಪ್ರತಿಭಟನೆ ನಡೆಸಿದರು.

ನೂರಾರು ರೈತರು ಘೋಷಣೆಗಳು ಕೂಗುತ್ತಾ ಡಿಸಿಸಿ ಬ್ಯಾಂಕ್ ಗೇಟ್ ಹತ್ತಿರ ಬಂದು ಬ್ಯಾಂಕ್ ಒಳಗಡೆ ನುಗ್ಗಲು ಪ್ರಯತ್ನಿಸಿದಾಗ ಪೊಲೀಸರು ಅವರನ್ನು ತಡೆಯಲು ಹರಸಾಹಸಪಟ್ಟರು. ಆದರೆ, ರೈತರು ಯಾವುದನ್ನೂ ಲೆಕ್ಕಿಸದೆ ಬ್ಯಾಂಕ್ ಗೇಟ್ ಅನ್ನು ತಳ್ಳಿ ಬ್ಯಾಂಕ್‌ನ ಒಳಗಡೆ ನುಗ್ಗಿ ಘೋಷಣೆಗಳು ಕೂಗಿದರು. ಈ ವೇಳೆ ರೈತ ಮುಖಂಡ ಶ್ರೀಮಂತ್ ಅವರು ಮಾತನಾಡಿ, ನಮ್ಮ ಜಿಲ್ಲೆಯಲ್ಲಿಯೇ ಅತ್ಯಂತ ಹಳೆಯ ಕಾರ್ಖಾನೆ ಎಂದರೆ ಅದು ಬಿಎಸ್‌ಎಸ್‌ಕೆ ಕಾರ್ಖಾನೆಯಾಗಿದೆ. ಆ ಕಾರ್ಖಾನೆಯಿಂದಲೇ ಡಿಸಿಸಿ ಬ್ಯಾಂಕ್ ಅಭಿವೃದ್ಧಿಯಾಗಿದೆ. ಆದರೆ, ಕಾರ್ಖಾನೆಯ ಆಡಳಿತ ಮಂಡಳಿಯವರು ಕಾರ್ಖಾನೆಯನ್ನು ನುಂಗಿ ನೀರು ಕುಡಿದಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ಹರಾಜು ಪ್ರಕ್ರಿಯೆ ಮುಂದೂಡುವುದು ಬೇಡ, ಸರ್ಕಾರದ ಆದೇಶದಂತೆ ಅದನ್ನು ಸಂಪೂರ್ಣವಾಗಿ ರದ್ದು ಮಾಡಬೇಕು. ಇಲ್ಲದಿದ್ದರೆ ಹರಾಜು ಪ್ರಕ್ರಿಯೆ ನಡೆಯುತ್ತಿದ್ದರೆ ನಾವು ಮತ್ತೆ ಹೋರಾಟ ಮಾಡಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ರೈತರ ಹೋರಾಟಕ್ಕೆ ಶಾಸಕರಾದ ಸಿದ್ದು ಪಾಟೀಲ್, ಡಾ.ಶೈಲೇಂದ್ರ ಬೆಲ್ದಾಳೆ ಸೇರಿದಂತೆ ಇತರರು ಬೆಂಬಲ ಸೂಚಿಸಿದರು. ರೈತರ ಹೋರಾಟಕ್ಕೆ ಮಣಿದ ಡಿಸಿಸಿ ಬ್ಯಾಂಕ್‌ನ ಆಡಳಿತ ಅಧಿಕಾರಿಗಳು ಹರಾಜು ಪ್ರಕ್ರಿಯೆಯನ್ನು ಮುಂದೂಡಿದರು.

ಕೆಪಿಎಸ್‌ಸಿ ನೇಮಕಾತಿ ಹಗರಣ : ಭಾಲ್ಕಿಯ ಲಕ್ಷ್ಮಿ ಸೌಹಾರ್ದ ಸಹಕಾರಿ ಬ್ಯಾಂಕ್ ಮೇಲೆ ಸಿಐಡಿ ದಾಳಿ




ಬೀದರ್ ,ಸೆ.03-

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಹಗರಣ ಪ್ರಕರಣದಲ್ಲಿ ಬಸವರಾಜ್ ಕನ್ನಾಳೆ ಬಂಧನದ ಬೆನ್ನಲ್ಲೇ ಭಾಲ್ಕಿ ಪಟ್ಟಣದ ಲೆಕ್ಚರ್ ಕಾಲೋನಿಯಲ್ಲಿರುವ ಓಂ ಲಕ್ಷ್ಮೀ ಸೌಹಾರ್ದ ಸಹಕಾರಿ ಬ್ಯಾಂಕ್ ಮೇಲೆ ಸಿಐಡಿ ಅಧಿಕಾರಿಗಳ ತಂಡ ಬುಧವಾರ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸಿದೆ.

ಕೆಪಿಎಸ್‌ಸಿ ಹಗರಣದ ತನಿಖೆಯ ಭಾಗವಾಗಿ ಸಿಐಡಿ ಅಧಿಕಾರಿಗಳು ಬ್ಯಾಂಕ್‌ಗೆ ತೆರಳಿ ಬ್ಯಾಂಕ್‌ನ ವಿವಿಧ ದಾಖಲೆಗಳು, ವಹಿವಾಟುಗಳು ಹಾಗೂ ಸಂಬಂಧಿತ ಮಾಹಿತಿಗಳನ್ನು ಪರಿಶೀಲಿಸಿದ್ದಾರೆ ಎಂದು ತಿಳಿದು ಬಂದಿದೆ.

ಬಸವರಾಜ್ ಕನ್ನಾಳೆಗೆ ಸೇರಿದ ಬ್ಯಾಂಕ್ ಖಾತೆಗಳು, ವಿವಿಧ ದಾಖಲೆಗಳನ್ನು ಪರಿಶೀಲಿಸಿದೆ. ಬಸವರಾಜ್ ಕನ್ನಾಳೆ ಮತ್ತು ಭಾಲ್ಕಿಯ ಈ ಓಂ ಲಕ್ಷ್ಮೀ ಸೌಹಾರ್ದ ಸಹಕಾರಿ ಬ್ಯಾಂಕ್‌ನ ನಡುವಿನ ಸಂಬಂಧದ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ತಿಳಿದು ಬಂದಿದೆ.

ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬಂಧಿಗಳಿಗೆ ಎಲೆಕ್ಟ್ರಿಷಿಯನ್ ತರಬೇತಿ



ಕಲಬುರಗಿ,ಸೆ.03-

ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನ ಹಾಗೂ ಕಲಬುರಗಿ ಕೇಂದ್ರ ಕಾರಾಗೃಹದ ಸಹಯೋಗದಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ಯೋಜನೆಯಡಿ ಕಾರಾಗೃಹದ 40 ಮಂದಿ ಶಿಕ್ಷಾ ಬಂಧಿಗಳಿಗೆ ನೀಡಲಾಗಿದ್ದ ಎಲೆಕ್ಟ್ರೀಷಿಯನ್ ತರಬೇತಿಯ ಮೌಲ್ಯಮಾಪನ ಕಾರ್ಯಕ್ರಮ ನಡೆಯಿತು.

ಕಳೆದ ಜುಲೈ 5ರಿಂದ ಆರಂಭಗೊಂಡಿದ್ದ ಎಲೆಕ್ಟ್ರಿಷಿಯನ್ ತರಬೇತಿಯನ್ನು ಬಂಧಿಗಳು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ತರಬೇತಿಯ ಸಂದರ್ಭದಲ್ಲಿ ಕಲಿತಿರುವ ಕೌಶಲ್ಯ ಹಾಗೂ ಪ್ರಾಯೋಗಿಕ ಜ್ಞಾನವನ್ನು ಮೌಲ್ಯಮಾಪನ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಕಲಬುರಗಿ ಕೇಂದ್ರ ಕಾರಾಗೃಹದ ಮಹಿಳಾ ಮತ್ತು ಪುರುಷ ಬಂದಿಗಳಿಗಾಗಿ '' '' ತರಬೇತಿ ಕಾರ್ಯಕ್ರಮಕ್ಕೂ ಮಂಗಳವಾರ ಚಾಲನೆ ನೀಡಲಾಯಿತು. ಬಂಧಿಗಳಲ್ಲಿ ವೃತ್ತಿಪರ ಕೌಶಲ್ಯಗಳನ್ನು ಬೆಳೆಸುವ ಮೂಲಕ ತರಬೇತಿಯ ನಂತರ ಸ್ವಾವಲಂಬಿ ಜೀವನ ನಡೆಸಲು ಅಗತ್ಯವಾದ ಅವಕಾಶಗಳನ್ನು ಕಲ್ಪಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನದ ಸಂಪನ್ಮೂಲ ವ್ಯಕ್ತಿಗಳಾದ ಡಾ. ಸೈಯದ್ ಬಿಲಾನ್, ಸುರೇಂದ್ರ ಪಾಟೀಲ್, ಬಸವರಾಜ ಡಾಬಾ ಹಾಗೂ ರಾಜಶೇಖರ ಬಿರಾದಾರ ಕಲಬುರಗಿ ಮತ್ತು ಶಿಕ್ಷಕ ನಾಗರಾಜ ಮುಲಗೆ ಉಪಸ್ಥಿತರಿದ್ದರು. ಕಾರಾಗೃಹದಲ್ಲಿರುವ ಬಂದಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ಬೆಳೆಸುವುದು, ಉದ್ಯೋಗಾವಕಾಶಗಳಿಗೆ ಸಿದ್ಧಗೊಳಿಸುವುದು ಹಾಗೂ ಸಮಾಜದ ಮುಖ್ಯವಾಹಿನಿಗೆ ಮರಳಲು ಅಗತ್ಯವಾದ ಕೌಶಲ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಈ ತರಬೇತಿ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.

ನಿಮ್ಮೂರು ಸುದ್ದಿ

ಸಂಪಾದಕೀಯ



ಗುಳೆ ಹೊಸದಲ್ಲ, ಪರ್ಯಾಯ ಹುಡುಕದಿರುವುದು ಸರ್ಕಾರದ ವೈಫಲ್ಯವಲ್ಲವೇ?

ಗುಳೆ ಸಮಸ್ಯೆಯನ್ನು ಕೇವಲ ಕೃಷಿಕರ, ಬಡ ಕೃಷಿ ಕೂಲಿ ಕಾರ್ಮಿಕರ ಸಮಸ್ಯೆ ಎಂದು ನೋಡುವ ಮನೋಭಾವ ಬದಲಾಗಬೇಕಿದೆ. ಇದು ಗ್ರಾಮೀಣ ಅಭಿವೃದ್ಧಿ, ಉದ್ಯೋಗ, ನೀರು, ಕೃಷಿ ಮತ್ತು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ಸಮಗ್ರ ಪ್ರಶ್ನೆ ಎನ್ನುವುದನ್ನು ಸರ್ಕಾರ ಅರಿತು, ಪರ್ಯಾಯ ಮಾರ್ಗಗಳತ್ತ ಗಮನ ಹರಿಸಬೇಕಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಿಣ್ಯಂ ಗ್ರಾಮದ ಮಣಿಗರ್ ಪುಟ್ಟಪ್ಪ ಎಂಬ ದನಗಾಹಿ ತನ್ನ ಹತ್ತಾರು ದನ-ಕರುಗಳ ಮುಂದೆ ನಿಂತು, ನನ್ ದನ್ಕರ ಮೇವಿಲ್ದೆ, ನೀರಿಲ್ದೆ ಸಾಯ್ತಾವೆ, ನೋಡಕ್ಕಾಯ್ತಿಲ್ಲ ಅವುನ್ನೋಡಿ ನನ್ಗೂ ಸಾಯ್ಬೇಕನ್ನಿಸ್ತಾಯ್ತೆ ಸರ್ಕಾರ್ದೋರು ಏನಾರ ಮಾಡಬೇಕು ಎಂದು ದೈನ್ಯದಿಂದ ಬೇಡಿಕೊಳ್ಳುತ್ತಿದ್ದಾರೆ. ಅದನ್ನು ಮತ್ತೊಬ್ಬರು ವಿಡಿಯೋ ಮಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ.

ಅದು ವೈರಲ್ ಆಗಲಿ ಎಂದು ಮಾಡಿದ ವಿಡಿಯೋ ಅಲ್ಲ. ನಾಲ್ಕು ಜನ ನೋಡಿ ರೈತರ ದಾರುಣ ಸ್ಥಿತಿಗೆ ಕರಗಿ ಕನಿಕರಿಸಲಿ ಎಂದು ಮಾಡಿದ ವಿಡಿಯೋ. ಈ ಸಲದ ಮುಂಗಾರು ಕೈ ಕೊಟ್ಟಿದೆ. ಮಳೆ ಬರದೆ, ಬೆಳೆ ಆಗದೆ, ಬರಗಾಲ ಬಂದು ತಿನ್ನಲಿಕ್ಕೆ ಹಿಟ್ಟಿಲ್ಲದಂತಾಗಿದೆ. ಆದರೆ ಈ ಪುಟ್ಟಪ್ಪ ಬೇಡುತ್ತಿರುವುದು ತನಗಲ್ಲ, ತನ್ನ ದನಕರುಗಳಿಗೆ. ದನಕರುಗಳ ಮೈ ನೀವಿದವರಿಗೆ, ಹುಲ್ಲು ಹಾಕಿದವರಿಗೆ ಪುಟ್ಟಪ್ಪನ ಸಂಕಟ ಅರ್ಥವಾಗುತ್ತದೆ. ಅರ್ಥವಾಗದ ಅಧಿಕಾರಿಗಳು ಮತ್ತು ಅಧಿಕಾರಸ್ಥರು ಅಂಕಿ-ಸಂಖ್ಯೆಗಳ ಆಟವಾಡುತ್ತ, ಮಾತುಗಳಲ್ಲಿ ಮಹಲು ಕಟ್ಟುತ್ತ, ಹಳ್ಳಿಗರನ್ನು ದಿಕ್ಕೆಟ್ಟ ಸ್ಥಿತಿಗೆ ದೂಡುತ್ತಿದ್ದಾರೆ. ಗುಳೆ ಹೋಗುವುದನ್ನು ಅನಿವಾರ್ಯವಾಗಿಸುತ್ತಿದ್ದಾರೆ.

ಒಂದು ಕಾಲದಲ್ಲಿ ಹಳ್ಳಿಯೆಂದರೆ ಕೃಷಿ, ನೀರು, ಬೆಳೆ, ಜಾನುವಾರುಗಳ ಸಮೃದ್ಧ ಬದುಕು. ಆದರೆ ಇಂದು ಇದೇ ಹಳ್ಳಿಗಳು ವೃದ್ಧರ ಬೀಡಾಗಿವೆ, ಬಿಕೋ ಎನ್ನುತ್ತಿವೆ. ಮಳೆ ಕೈಕೊಟ್ಟು ಹೊಲ ಒಣಗಿವೆ; ಬೆಳೆ ಕೈಕೊಟ್ಟು ರೈತನ ಆದಾಯ ಕುಸಿದಿದೆ; ಸ್ಥಳೀಯವಾಗಿ ಉದ್ಯೋಗ ಸಿಗದೆ ಕುಟುಂಬಗಳು ಬದುಕಿನ ಬಂಡಿ ಎಳೆಯಲು ಬೆಂಗಳೂರು, ಮಂಗಳೂರು, ಗೋವಾ, ಮುಂಬೈ ನಗರಗಳತ್ತ ಮುಖ ಮಾಡುತ್ತಿವೆ. ಇದು ಕೇವಲ ಗುಳೆಯಲ್ಲ; ಗ್ರಾಮೀಣ ಬದುಕಿನ ಅಸಹಾಯಕತೆಯ ಕನ್ನಡಿ.

ಕರ್ನಾಟಕದ ಬರಪೀಡಿತ ಹಾಗೂ ಹಿಂದುಳಿದ ಪ್ರದೇಶಗಳಲ್ಲಿ ಗುಳೆ ಹೋಗುವುದು ಹೊಸದಲ್ಲ. ತಪ್ಪೇನಲ್ಲ. ಉತ್ತಮ ಬದುಕಿಗಾಗಿ ಸ್ಥಳಾಂತರವಾಗುವುದು ಪ್ರತಿಯೊಬ್ಬ ನಾಗರಿಕನ ಹಕ್ಕು. ಆದರೆ ಬದುಕಲು ಬೇರೆ ದಾರಿ ಇಲ್ಲದೆ ಊರು ತೊರೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗುವುದು ಆತಂಕಕಾರಿ. ಅದರಲ್ಲೂ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕದ ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಕಲಬುರಗಿ, ಯಾದಗಿರಿ, ಬೀದರ್, ಬಳ್ಳಾರಿ, ವಿಜಯನಗರ, ಚಿತ್ರದುರ್ಗ, ದಾವಣಗೆರೆ, ಬೆಳಗಾವಿ ಜಿಲ್ಲೆಗಳಲ್ಲಿ ಇದು ಪ್ರತಿವರ್ಷದ ಪಡಿಪಾಟಲು. ಇಡೀ ಕುಟುಂಬವೇ ಗುಳೆ ಹೋದಾಗ ಮಕ್ಕಳ ಶಿಕ್ಷಣ, ಮಹಿಳೆಯರ ಸುರಕ್ಷತೆ, ಆರೋಗ್ಯ, ಆಹಾರ ಮತ್ತು ಸಾಮಾಜಿಕ ಭದ್ರತೆಯಂತಹ ಗಂಭೀರ ಸಮಸ್ಯೆಗಳು ಸೃಷ್ಟಿಯಾಗುತ್ತವೆ. ಇದು ಸಮಾಜ ಮತ್ತು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಾದ ವಿಚಾರ.

ಈ ಹಿನ್ನೆಲೆಯಲ್ಲಿ ಸರ್ಕಾರದ ಹೊಣೆಗಾರಿಕೆ ದೊಡ್ಡದು. ಉದ್ಯೋಗ ಖಾತ್ರಿ ಯೋಜನೆಯ ಮೂಲಕ ಗ್ರಾಮೀಣ ಪ್ರದೇಶದಲ್ಲಿಯೇ ಕೆಲಸ ಒದಗಿಸುವುದು, ಕೆರೆಕಟ್ಟೆ, ಚೆಕ್‌ಡ್ಯಾಂ, ಜಲ ಸಂರಕ್ಷಣಾ ಕಾಮಗಾರಿಗಳನ್ನು ಕೈಗೊಳ್ಳುವುದು ಯುದ್ಧೋಪಾದಿಯಲ್ಲಿ ನಡೆಯಬೇಕು. ಆದರೆ, ಕೇಂದ್ರದ ನರೇಂದ್ರ ಮೋದಿಯವರ ಎನ್‌ಡಿಎ ಸರ್ಕಾರ, ಗ್ರಾಮೀಣ ಪ್ರದೇಶದ ಕೃಷಿ ಕಾರ್ಮಿಕರ ನೆರವಿಗಿದ್ದ, ಹಿಂದಿನ ಯುಪಿಎ ಸರ್ಕಾರದ ನರೇಗಾ ಯೋಜನೆಯನ್ನು ಬದಲಿಸಿ ಜುಲೈ 1ರಿಂದ ಜಿ ರಾಮ್ ಜಿ ಯೋಜನೆಯನ್ನು ಜಾರಿ ಮಾಡಿದ್ದರೂ, ಈವರೆಗೆ ಉದ್ಯೋಗ ಖಾತರಿಯ ಭರವಸೆ ದೊರಕಿಲ್ಲ, ಜೊತೆಗೆ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ನರೇಗಾದ 746 ಕೋಟಿ ಬಾಕಿಯನ್ನೂ ಬಿಡುಗಡೆ ಮಾಡಿಲ್ಲ.

ತುರ್ತು ಕ್ರಮವಾಗಿ ಸರ್ಕಾರ ಕುಡಿಯುವ ನೀರು ಪೂರೈಸುವುದು, ಜಾನುವಾರುಗಳಿಗೆ ಮೇವು ಒದಗಿಸುವುದು, ಬರ ಪರಿಹಾರ ಮತ್ತು ಬೆಳೆ ವಿಮೆಯಂತಹ ನೆರವು ನೀಡುವುದು ಅಗತ್ಯ. ಇಂತಹ ಕ್ರಮಗಳು ತಕ್ಷಣದ ಸಂಕಷ್ಟವನ್ನು ತಗ್ಗಿಸಬಹುದು. ಇವುಗಳ ಜೊತೆಗೆ ಶಾಶ್ವತ ಪರಿಹಾರದತ್ತವೂ ಸರ್ಕಾರ ಗಮನಹರಿಸಬೇಕಿದೆ.

ಗುಳೆ ತಡೆಯಲು ಕೇವಲ ಉದ್ಯೋಗ ಖಾತ್ರಿ ಸಾಕಾಗುವುದಿಲ್ಲ. ಗ್ರಾಮೀಣ ಪ್ರದೇಶಗಳಲ್ಲಿ ವರ್ಷಪೂರ್ತಿ ಆದಾಯ ಸಿಗುವಂತಹ ಪರ್ಯಾಯ ಉದ್ಯೋಗಗಳನ್ನು ಸೃಷ್ಟಿಸಬೇಕಿದೆ. ಹೈನುಗಾರಿಕೆ, ಕುರಿಮೇಕೆ ಸಾಕಣೆ, ಕೋಳಿ ಸಾಕಣೆ, ಆಹಾರ ಸಂಸ್ಕರಣೆ, ಸಣ್ಣ ಕೈಗಾರಿಕೆಗಳು, ಗ್ರಾಮೀಣ ಪ್ರವಾಸೋದ್ಯಮ ಮತ್ತು ಸ್ವಸಹಾಯ ಸಂಘಗಳ ಚಟುವಟಿಕೆಗಳಿಗೆ ಉತ್ತೇಜನ ನೀಡಬೇಕಿದೆ. ರೈತ ಉತ್ಪಾದಕರ ಸಂಘಗಳನ್ನು ಬಲಪಡಿಸಿ, ರೈತರು ತಮ್ಮ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಮತ್ತು ಬೆಲೆ ಪಡೆಯುವ ವ್ಯವಸ್ಥೆಯನ್ನು ರೂಪಿಸಬೇಕಿದೆ.

ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವುದು ಮತ್ತೊಂದು ಪ್ರಮುಖ ಹೆಜ್ಜೆ. ಮಳೆನೀರು ಸಂಗ್ರಹ, ಕೆರೆಗಳ ಪುನಶ್ಚೇತನ, ಜಲಾನಯನ ಅಭಿವೃದ್ಧಿ, ಅಂತರ್ಜಲ ಮರುಪೂರಣ ಮತ್ತು ಸೂಕ್ಷ್ಮ ನೀರಾವರಿ ವ್ಯವಸ್ಥೆಗಳನ್ನು ವಿಸ್ತರಿಸಬೇಕು. ಕಡಿಮೆ ನೀರಿನಲ್ಲಿ ಬೆಳೆಯುವ ಬೆಳೆಗಳ ಬಗ್ಗೆ ರೈತರಿಗೆ ಮಾಹಿತಿ ಒದಗಿಸಬೇಕು. ಉತ್ತೇಜಿಸಬೇಕು. ನೀರು ಉಳಿದರೆ- ಕೃಷಿ ಉಳಿಯುತ್ತದೆ; ಕೃಷಿ ಉಳಿದರೆ- ಗ್ರಾಮೀಣ ಬದುಕೂ ಬಲಗೊಳ್ಳುತ್ತದೆ.

ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಈ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ. ಜುಲೈ 1ರಿಂದ ಜಿ ರಾಮ್ ಜಿ ಯೋಜನೆ ಜಾರಿ ಮಾಡಿದೆ. ಆದರೆ ಅದು ಆರಂಭಿಕ ಹಂತ ಬಿಟ್ಟು ಮೇಲೆದ್ದಿಲ್ಲ. ಉದ್ಯೋಗ ಖಾತರಿ ಆಶಯ ಈಡೇರಿಲ್ಲ, ಸರ್ಕಾರ ತುರ್ತು ಕ್ರಮಗಳನ್ನು ಕೈಗೊಂಡಿದೆ. ನೀರು ಮತ್ತು ಮೇವುಗಾಗಿಯೇ 306 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಕೆಲವೆಡೆ ರಾಜಕಾರಣಿಗಳು ಕಾಳಜಿ ತೋರಿದರೆ, ಅಧಿಕಾರಿಗಳು ಸೋಮಾರಿಗಳಾಗುತ್ತಾರೆ; ಹಲವೆಡೆ ರಾಜಕಾರಣಿಗಳು ಸೋಮಾರಿಗಳಾದರೆ, ಅಧಿಕಾರಿಗಳು ಕಾಳಜಿ ತೋರುತ್ತಾರೆ. ಪರಿಣಾಮವಾಗಿ ಪರಿಹಾರ ಕಾರ್ಯಗಳು ಸಂತ್ರಸ್ತರ ಕೈಗೆ ತಲುಪುವಲ್ಲಿ ತಡವಾಗುತ್ತದೆ. ಎವರಿಬಡಿ ಲವ್ಸ್ ಗುಡ್ ಡ್ರಾಟ್ ಎನ್ನುವುದು ವರ್ಷದಿಂದ ವರ್ಷಕ್ಕೆ ಸಾಬೀತಾಗುತ್ತಲೇ ಇದೆ.

ಏತನ್ಮಧ್ಯೆ, ಮುಖ್ಯಮಂತ್ರಿಗಳು ಸೆ. 1ರಂದು ಬರಗಾಲ ಪರಿಸ್ಥಿತಿ ಪರಿಶೀಲಿಸಲು ಗದಗ ಜಿಲ್ಲೆಗೆ ಭೇಟಿ ನೀಡಿದ್ದರು. ರೈತರ ಜಮೀನುಗಳಿಗೆ ತೆರಳಿ ಬಿತ್ತನೆ, ಮಳೆ ಪ್ರಮಾಣ, ಬೆಳೆಗಳ ಬೆಳವಣಿಗೆ ಹಾಗೂ ನಷ್ಟದ ಕುರಿತು ಮಾಹಿತಿ ಪಡೆದರು. ಕದಾಂಪೂರ ಗ್ರಾಮದ ಹೊಲದಲ್ಲಿ ರೈತರ ನಡುವೆ ಕುಳಿತು ಬರ ಅಹವಾಲು ಆಲಿಸಿದರು. ಮಾಧ್ಯಮಗಳ ಮುಂದೆ ನಿಂತು, ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ವರದಿ ನೀಡಬೇಕು. ಅದರ ಆಧಾರದ ಮೇಲೆ ಬರ ಘೋಷಿಸಲಾಗುವುದು ಎಂದರು.

ಇನ್ನು ಕಂದಾಯ ಸಚಿವರು ಸೆ. 2ರಂದು ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಮತ್ತು ಹನೂರು ತಾಲೂಕುಗಳಿಗೆ ಬರ ಪರಿಸ್ಥಿತಿ ಅವಲೋಕಿಸಲು ತೆರಳಿದ್ದರು. ಯಥಾಪ್ರಕಾರ ಮಾಧ್ಯಮಗಳ ಮುಂದೆ ನಿಂತು, ಬರ ಪರಿಹಾರ ಕೊಡದ ಕೇಂದ್ರ ಸರ್ಕಾರವನ್ನು ದೂರಿದರು. ಜಿಲ್ಲೆಯಲ್ಲಿ 16 ವಾರಗಳಿಗೆ ಆಗುವಷ್ಟು ಮೇವಿನ ಸಂಗ್ರಹವಿದ್ದು, ಕೊರತೆಯಾಗದಂತೆ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಚಿವರ ಕೆಲಸ ಅಧಿಕಾರಿಗಳಿಗೆ ಸೂಚಿಸುವುದಷ್ಟೇ ಅಲ್ಲ, ಹನೂರು ತಾಲೂಕಿನ ಮಿಣ್ಯಂ ಗ್ರಾಮದ ಮಣಿಗರ್ ಪುಟ್ಟಪ್ಪನ ದನಕರುಗಳಿಗೆ ಅಧಿಕಾರಿಗಳು ನೀರು-ನಿಡಿ ವ್ಯವಸ್ಥೆ ಮಾಡಿದರೆ ಎಂಬುದನ್ನು ಪರಿಶೀಲಿಸುವ ಅಗತ್ಯವೂ ಇದೆ.

ಹಾಗೆಯೇ ಗುಳೆ ಸಮಸ್ಯೆಯನ್ನು ಕೇವಲ ಕೃಷಿಕರ, ಬಡ ಕೃಷಿ ಕೂಲಿ ಕಾರ್ಮಿಕರ ಸಮಸ್ಯೆ ಎಂದು ನೋಡುವ ಮನೋಭಾವ ಬದಲಾಗಬೇಕಿದೆ. ಇದು ಗ್ರಾಮೀಣ ಅಭಿವೃದ್ಧಿ, ಉದ್ಯೋಗ, ನೀರು, ಕೃಷಿ ಮತ್ತು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ಸಮಗ್ರ ಪ್ರಶ್ನೆ ಎನ್ನುವುದನ್ನು ಸರ್ಕಾರ ಅರಿತು, ಪರ್ಯಾಯ ಮಾರ್ಗಗಳತ್ತ ಗಮನ ಹರಿಸಬೇಕಿದೆ.

ಅನುಚ್ಛೇದ 142: ಸುಪ್ರೀಂ ಕೋರ್ಟ್‌ನ ವಿಶೇಷಾಧಿಕಾರ, ನ್ಯಾಯದ ಸಂಜೀವಿನಿ!

ದೇಶಾದ್ಯಂತ ಕಾಕ್ರೋಚ್ ಜನತಾ ಪಾರ್ಟಿ ನೇತೃತ್ವದಲ್ಲಿ ನಡೆದ ವಿದ್ಯಾರ್ಥಿ, ಯುವಜನರ ಬೃಹತ್ ಪ್ರತಿಭಟನೆಗಳ ಸಂದರ್ಭದಲ್ಲಿ ದಾಖಲಾಗಿದ್ದ ನೂರಾರು ಎಫ್‌ಐಆರ್‌ಗಳನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ. ಎಫ್‌ಐಆರ್‌ಗಳನ್ನು ಹಿಂಪಡೆಯುವಲ್ಲಿ ಸರ್ಕಾರಗಳು ವಿಳಂಬ ಧೋರಣೆ ತೋರಿದ್ದರಿಂದ ನ್ಯಾಯಾಲಯವು ಸಂವಿಧಾನದ ಅನುಚ್ಛೇದ 142ರ ಅಡಿಯಲ್ಲಿ ವಿಶೇಷ ಅಧಿಕಾರ ಬಳಸಿ, ಎಫ್‌ಐಆರ್‌ಗಳನ್ನು ರದ್ದುಗೊಳಿಸಿದೆ. ಧೀರ್ಘಾವಧಿಯ ವಿಚಾರಣೆ ಮತ್ತು ಕಾನೂನು ತಾಂತ್ರಿಕತೆಗಳಿಗೆ ಕಾಯದೆ, ಯುವಜನರ ಭವಿಷ್ಯ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಎತ್ತಿಹಿಡಿಯಲು ಈ ಐತಿಹಾಸಿಕ ಕ್ರಮ ಕೈಗೊಂಡಿದೆ.

ಏನಿದು ಅನುಚ್ಛೇದ 142?

ಭಾರತೀಯ ಸಂವಿಧಾನವು ಸುಪ್ರೀಂ ಕೋರ್ಟ್‌ಗೆ ಕೇವಲ ಶಾಸಕಾಂಗ ರೂಪಿಸಿದ ಕಾನೂನುಗಳನ್ನು ಯಾಂತ್ರಿಕವಾಗಿ ವ್ಯಾಖ್ಯಾನಿಸುವ ಜವಾಬ್ದಾರಿಯನ್ನಷ್ಟೇ ನೀಡಿಲ್ಲ. ಬದಲಾಗಿ, ಕೆಲವೊಂದು ಅತ್ಯಂತ ಅಸಾಧಾರಣ ಮತ್ತು ಸಂಕೀರ್ಣ ಸಂದರ್ಭಗಳಲ್ಲಿ, ಕಾನೂನಿನ ತಾಂತ್ರಿಕ ಮಿತಿಗಳನ್ನು ಮೀರಿ, ಪೂರ್ಣ ಪ್ರಮಾಣದ ಸಂಪೂರ್ಣ ನ್ಯಾಯ ( ) ಒದಗಿಸುವ ವಿಶೇಷ ಅಧಿಕಾರವನ್ನೂ ನೀಡಿದೆ. ಈ ವಿಶೇಷ ಸಂವಿಧಾನಿಕ ಅಧಿಕಾರವೇ ಅನುಚ್ಛೇದ 142. ಇದನ್ನು ನ್ಯಾಯಕ್ಕಾಗಿ ಇರುವ ಸಂಜೀವಿನಿ ಎಂದೂ ಬಣ್ಣಿಸಲಾಗಿದೆ.

ಸಮಾಜದ ಅತ್ಯಂತ ದುರ್ಬಲ ವ್ಯಕ್ತಿಗೂ ಅಂತಿಮವಾಗಿ ನ್ಯಾಯ ತಲುಪಿಸುವ ಉದ್ದೇಶದಿಂದ ಸುಪ್ರೀಂ ಕೋರ್ಟ್‌ಗೆ ಅನುಚ್ಛೇದ 142ರ ಅಡಿಯಲ್ಲಿ ವಿಶೇಷ ಅಧಿಕಾರ ಒದಗಿಸಲಾಗಿದೆ. ಸಾಮಾನ್ಯ ಕಾನೂನುಗಳ ಚೌಕಟ್ಟಿನಲ್ಲಿ ತಕ್ಷಣದ ಪರಿಹಾರ ಸಿಗದ ಸಂದರ್ಭಗಳಲ್ಲಿ, ಮೂಲಭೂತ ನ್ಯಾಯದ ಉದ್ದೇಶವನ್ನು ಈಡೇರಿಸಲು ಸುಪ್ರೀಂ ಕೋರ್ಟ್ ತನ್ನ ಅಸಾಧಾರಣ ಸಂವಿಧಾನಿಕ ಅಧಿಕಾರ ಬಳಸಿ ಯಾವುದೇ ಆದೇಶ ನೀಡಬಹುದು ಎಂದು ಈ ಅನುಚ್ಛೇದ ಹೇಳುತ್ತದೆ.

ಆದರೆ, ಈ ಅಧಿಕಾರವು ಸಾಮಾನ್ಯ ಆಡಳಿತ ವ್ಯವಸ್ಥೆಗೆ ಪರ್ಯಾಯವಲ್ಲ ಅಥವಾ ಪ್ರತಿಯೊಂದು ಸಣ್ಣಪುಟ್ಟ ಪ್ರಕರಣದಲ್ಲೂ ಬಳಸಬಹುದಾದ ಸಾಮಾನ್ಯ ಪ್ರಕ್ರಿಯೆಯಲ್ಲ. ಅಂತೆಯೇ, ನ್ಯಾಯಾಲಯಕ್ಕೆ ನೀಡಲಾಗಿರುವ ಯಾವುದೇ ಅನಿಯಂತ್ರಿತ ಅಥವಾ ಸ್ವೇಚ್ಛಾಚಾರದ ಅಧಿಕಾರವೂ ಅಲ್ಲ. ಇದು ಕೇವಲ ಅತ್ಯಂತ ವಿರಳ ಸಂದರ್ಭಗಳಲ್ಲಿ ಮಾತ್ರವೇ ಬಳಸಬಹುದಾದ ಸಂವಿಧಾನಿಕ ರಕ್ಷಣಾ ಕವಚವಾಗಿದೆ. ಸಂವಿಧಾನದ ಮೂಲಭೂತ ಆಶಯಗಳು, ನೈಸರ್ಗಿಕ ನ್ಯಾಯದ ತತ್ವಗಳು ಹಾಗೂ ಸಾರ್ವಜನಿಕ ಹಿತಾಸಕ್ತಿಯ ಭದ್ರ ಬುನಾದಿಯ ಮೇಲೆ ಮಾತ್ರವೇ ಈ ಅಧಿಕಾರವನ್ನು ನ್ಯಾಯಾಲಯ ಪ್ರಯೋಗಿಸುತ್ತದೆ.

ಸಂವಿಧಾನದ ಅನುಚ್ಛೇದ 142(1) ಹೇಳುವಂತೆ; ನ್ಯಾಯಾಲಯದ ಮುಂದೆ ಇರುವ ಯಾವುದೇ ಪ್ರಕರಣ ಅಥವಾ ವಿಷಯದಲ್ಲಿ ಸಂಪೂರ್ಣ ನ್ಯಾಯ ಒದಗಿಸಲು ಅಗತ್ಯವಿರುವ ಯಾವುದೇ ಆದೇಶ ಅಥವಾ ಆಜ್ಞೆಯನ್ನು ಹೊರಡಿಸುವ ಸಂಪೂರ್ಣ ಅಧಿಕಾರ ಸುಪ್ರೀಂ ಕೋರ್ಟ್‌ಗೆ ಇದೆ. ಹೀಗೆ ಹೊರಡಿಸಲಾದ ಆದೇಶಗಳು ಅಥವಾ ಆಜ್ಞೆಗಳು ಸಮಗ್ರ ಭಾರತದ ಭೂಭಾಗದಾದ್ಯಂತ ತಕ್ಷಣದಿಂದಲೇ ಜಾರಿಗೆ ಬರುತ್ತವೆ.

ಅಂದರೆ, ಯಾವುದೇ ಒಂದು ನಿರ್ದಿಷ್ಟ ಪ್ರಕರಣದಲ್ಲಿ ಕಾನೂನಿನ ಅಕ್ಷರಶಃ ಅನ್ವಯದಿಂದ ಅನ್ಯಾಯ ಉಂಟಾಗುವ ಅಪಾಯವಿದ್ದರೆ ಅಥವಾ ಚಾಲ್ತಿಯಲ್ಲಿರುವ ಕಾನೂನುಗಳಲ್ಲಿ ಅದಕ್ಕೆ ಸೂಕ್ತ ಪರಿಹಾರ ಮಾರ್ಗವೇ ಇಲ್ಲದಿರುವ ಪರಿಸ್ಥಿತಿ ನಿರ್ಮಾಣವಾದರೆ, ಸುಪ್ರೀಂ ಕೋರ್ಟ್ ತನ್ನ ವಿಶೇಷ ಅಧಿಕಾರವನ್ನು ಚಲಾಯಿಸುತ್ತದೆ.

ಅನುಚ್ಛೇದ 142ರ ಅಗತ್ಯ ಏಕೆ ಬಂತು?

ಸುಪ್ರೀಂ ಕೋರ್ಟ್‌ಗೆ ಅನುಚ್ಛೇದ 142ರ ಅಡಿಯಲ್ಲಿ ವಿಶೇಷ ಅಧಿಕಾರ ನೀಡುವುದರಲ್ಲಿ ಕಾನೂನು ಮತ್ತು ನ್ಯಾಯದ ನಡುವಿನ ಅಂತರವನ್ನು ಕಡಿಮೆ ಮಾಡುವುದು ಮುಖ್ಯ ಉದ್ದೇಶ. ಸಮಾಜವು ವೇಗವಾಗಿ ಬದಲಾಗುತ್ತಿದ್ದು, ಹೊಸ ಸಮಸ್ಯೆಗಳು ಎದುರಾಗುತ್ತವೆ. ಅದೇ ರೀತಿ, ಕೆಲವು ಸಂಕೀರ್ಣ ಪ್ರಕರಣಗಳಲ್ಲಿ ಕಾನೂನುಗಳು ಅಸ್ತಿತ್ವದಲ್ಲಿದ್ದರೂ, ಅವುಗಳ ಒಳಗೆ ನಿಗದಿಪಡಿಸಲಾದ ಮಿತಿಗಳಿಂದಾಗಿ ಸಂತ್ರಸ್ತರಿಗೆ ಸಂಪೂರ್ಣ ಮತ್ತು ತೃಪ್ತಿಕರ ನ್ಯಾಯ ಸಿಗುವುದು ಅಸಾಧ್ಯವಾಗುತ್ತದೆ. ಅಂತಹ ತುರ್ತು ಸಂದರ್ಭಗಳಲ್ಲಿ ಅನುಚ್ಛೇದ 142 ನ್ಯಾಯಾಂಗಕ್ಕೆ ಸಮಯೋಚಿತವಾಗಿ ಮಧ್ಯಪ್ರವೇಶಿಸುವ ಹಕ್ಕನ್ನು ನೀಡುತ್ತದೆ. ಅಲ್ಲದೆ, ಸಾಮಾನ್ಯ ಶಾಸನಗಳ ಚೌಕಟ್ಟನ್ನು ದಾಟಿ, ಸಂವಿಧಾನದ ವಿಶಾಲ ಮೂಲಭೂತ ತತ್ವಗಳನ್ನೇ ಆಧಾರವಾಗಿಟ್ಟುಕೊಂಡು ಪರ್ಯಾಯ ಪರಿಹಾರ ರೂಪಿಸುತ್ತದೆ.

ಈ ಅಧಿಕಾರದ ಮೂಲ ಉದ್ದೇಶ ಶಾಸಕಾಂಗದ ಕೆಲಸವನ್ನು ಕಸಿದುಕೊಳ್ಳುವುದಲ್ಲ ಅಥವಾ ಚಾಲ್ತಿಯಲ್ಲಿರುವ ಕಾನೂನನ್ನು ಬದಲಿಸುವುದಲ್ಲ; ಬದಲಾಗಿ, ಕಾನೂನಿನ ಅಂತಿಮ ಗುರಿಯಾದ ನ್ಯಾಯವನ್ನು ಜೀವಂತವಾಗಿಡಲು, ಯಾಂತ್ರಿಕವಾಗಿ ಕಾನೂನಿನ ಪದಗಳನ್ನು ಪಾಲಿಸುವುದಕ್ಕಿಂತ, ಆ ಕಾನೂನಿನ ಹಿಂದಿರುವ ನ್ಯಾಯದ ಪರಮೋಚ್ಚ ಉದ್ದೇಶಕ್ಕೆ ಆದ್ಯತೆ ನೀಡುವುದು ಈ ಅನುಚ್ಛೇದವನ್ನು ಸಂವಿಧಾನದಲ್ಲಿ ತರಲಾಗಿದೆ.

ಅನುಚ್ಛೇದ 142ಅನ್ನು ಸುಪ್ರೀಂ ಕೋರ್ಟ್ ಯಾವಾಗೆಲ್ಲ ಬಳಸಿದೆ?

ವಿಶಾಖ ಮಾರ್ಗಸೂಚಿ: ಸಂವಿಧಾನದ ಅನುಚ್ಛೇದ 142ಅನ್ನು ಅತ್ಯಂತಕ ಪರಿಣಾಮಕಾರಿ ಮತ್ತು ಐತಿಹಾಸಿಕವಾಗಿ ಸುಪ್ರೀಂ ಕೋರ್ಟ್ ಮೊದಲ ಬಾರಿಗೆ ಬಳಸಿದ್ದು 1997ರಲ್ಲಿ ವಿಶಾಖ ಮಾರ್ಗಸೂಚಿ ಜಾರಿಗೊಳಿಸುವಾಗ. ಆ ಸಮಯದಲ್ಲಿ; ಭಾರತದಲ್ಲಿ ಮಹಿಳೆಯರ ಗೌರವ, ಸಮಾನತೆ ಹಾಗೂ ಸುರಕ್ಷತೆಯು ಸಂವಿಧಾನ ನೀಡಿದ ಮೂಲಭೂತ ಹಕ್ಕುಗಳ ಭಾಗವಾಗಿತ್ತು. ಆದರೆ, ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ಲೈಂಗಿಕ ಕಿರುಕುಳವನ್ನು ತಡೆಯಲು ಯಾವುದೇ ನಿರ್ದಿಷ್ಟ ಅಥವಾ ಸಮಗ್ರ ಕಾನೂನು ಇರಲಿಲ್ಲ.

ಈ ಕಾನೂನು ಕೊರತೆಯನ್ನು ಗಮನಿಸಿದ ಸುಪ್ರೀಂ ಕೋರ್ಟ್, ಅನುಚ್ಛೇದ 142ರ ಅಡಿಯಲ್ಲಿ ತನ್ನ ವಿಶೇಷ



ಅಧಿಕಾರವನ್ನು ಬಳಸಿ ವಿಶಾಖ ಮಾರ್ಗದರ್ಶಿ ಸೂತ್ರಗಳನ್ನು ರೂಪಿಸಿತು. ಶಾಸಕಾಂಗವು ನೂತನ ಕಾನೂನು ತರುವವರೆಗೂ ಈ ಮಾರ್ಗಸೂಚಿಗಳೇ ದೇಶಾದ್ಯಂತ ಕಾನೂನಿನ ಬಲದೊಂದಿಗೆ ಜಾರಿಯಲ್ಲಿದ್ದವು. ನಂತರದ ದಿನಗಳಲ್ಲಿ ಇದೇ ಮಾರ್ಗಸೂಚಿಗಳನ್ನು ಆಧಾರವಾಗಿಟ್ಟುಕೊಂಡು ಕೇಂದ್ರ ಸರ್ಕಾರವು 2013ರಲ್ಲಿ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆಯನ್ನು ಜಾರಿಗೆ ತಂದಿತು.

ಭೋಪಾಲ್ ಅನಿಲ ದುರಂತ: 1984ರಲ್ಲಿ ಸಂಭವಿಸಿದ ಭೋಪಾಲ್ ಅನಿಲ ದುರಂತವು ಮಾನವ ಇತಿಹಾಸದ ಅತ್ಯಂತ ಭೀಕರ ಕೈಗಾರಿಕಾ ವಿಪತ್ತುಗಳಲ್ಲಿ ಒಂದಾಗಿದೆ. ಯೂನಿಯನ್ ಕಾರ್ಬೈಡ್ ಸಂಸ್ಥೆಯ ವಿಷಕಾರಿ ಅನಿಲ ಸೋರಿಕೆಯಿಂದಾಗಿ ಸಾವಿರಾರು ಅಮಾಯಕರು ಕೆಲವೇ ನಿಮಿಷಗಳಲ್ಲಿ ಪ್ರಾಣ ಕಳೆದುಕೊಂಡರೆ, ಲಕ್ಷಾಂತರ ಜನರು ಜೀವನಪೂರ್ತಿ ರೋಗರುಜಿನಗಳಿಂದ ಬಳಲುವಂತಾಯಿತು. ಈ ಪ್ರಕರಣದಲ್ಲಿ ಸಂತ್ರಸ್ತರಿಗೆ ತಕ್ಷಣದ ಆರ್ಥಿಕ ಮತ್ತು ವೈದ್ಯಕೀಯ ಪರಿಹಾರ ಸಿಗಬೇಕಾದ ತುರ್ತು ಅಗತ್ಯವಿತ್ತು. ಸಾಮಾನ್ಯ ಸಿವಿಲ್ ಮತ್ತು ಕ್ರಿಮಿನಲ್ ನ್ಯಾಯಾಲಯಗಳ ದೀರ್ಘಾವಧಿಯ ವಿಚಾರಣೆ ಮುಗಿಯುವವರೆಗೆ ಕಾಯುವುದು ಮಾನವೀಯತೆಯ ದೃಷ್ಟಿಯಿಂದ ಅಸಾಧ್ಯವಾಗಿತ್ತು.

ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಅನುಚ್ಛೇದ 142ರ ಸಂವಿಧಾನಿಕ ಶಕ್ತಿಯನ್ನು ಬಳಸಿಕೊಂಡು, ಕಂಪನಿಯು ಸಂತ್ರಸ್ತರಿಗೆ ಬಹುಕೋಟಿ ಮೊತ್ತದಲ್ಲಿ ಪರಿಹಾರ ನೀಡಬೇಕೆಂದು ನಿಗದಿ ಮಾಡಿತು, ಪರಿಹಾರವು ತಕ್ಷಣವೇ ಸಂತ್ರಸ್ತರಿಗೆ ತಲುಪುವಂತೆ ವ್ಯವಸ್ಥೆ ಮಾಡಿತು. ಕೇವಲ ತಾಂತ್ರಿಕ ವಿಚಾರಣೆ ನಡೆಸುವುದಕ್ಕಿಂತ ಮಾನವೀಯ ತುರ್ತುಸ್ಥಿತಿಗೆ ಸ್ಪಂದಿಸುವುದು ನ್ಯಾಯಾಂಗದ ಕರ್ತವ್ಯ ಎಂದು ನ್ಯಾಯಾಲಯ ಹೇಳಿತು.

ಬಾಬರಿ ಮಸೀದಿ ವಿವಾದ: ನ್ಯಾಯಾಲಯವು ಅನುಚ್ಛೇದ 142ಅನ್ನು ಬಳಸಿದ್ದಕ್ಕೆ ತೀವ್ರ ಟೀಕೆಗಳು ವ್ಯಕ್ತವಾಗಿದ್ದು ಅಯೋಧ್ಯೆಯ ಬಾಬರಿ ಮಸೀದಿ ಪ್ರಕರಣದಲ್ಲಿ. ಅಯೋಧ್ಯೆ ಬಾಬರಿ ಮಸೀದಿ ಭೂವಿವಾದ ಪ್ರಕರಣವು ಭಾರತದ ಅತ್ಯಂತ ಸೂಕ್ಷ್ಮ, ಭಾವನಾತ್ಮಕ ಹಾಗೂ ದೀರ್ಘಕಾಲದ ನ್ಯಾಯಾಂಗ ಸವಾಲಾಗಿತ್ತು. ಈ ವಿವಾದಿತ ಜಾಗದ ಕುರಿತು 2019ರಲ್ಲಿ ಸಿವಿಲ್ ಕಾನೂನುಗಳ ಆಧಾರದ ಮೇಲೆ ಅಂತಿಮ ತೀರ್ಪು ನೀಡಿದ ಸುಪ್ರೀಂ ಕೋರ್ಟ್, ಆಸ್ತಿ ಹಕ್ಕಿನ ನಿರ್ಧಾರದ ಹೊರತಾಗಿ ದೇಶದ ಸಾಂವಿಧಾನಿಕ ಶಾಂತಿ, ಸೌಹಾರ್ದತೆ ಹಾಗೂ ಸಮತೋಲನವನ್ನು ಕಾಯ್ದುಕೊಳ್ಳುವ ಉದ್ದೇಶದಿಂದ, ಅನುಚ್ಛೇದ 142ಅನ್ನು ಬಳಸಿತು. ಬಾಬರಿ ಮಸೀದಿಯಿದ್ದ ಜಾಗವನ್ನು ರಾಮಮಂದಿರ ನಿರ್ಮಾಣ ಕೊಟ್ಟು, ಮಸೀದಿ ನಿರ್ಮಾಣಕ್ಕೆ ಪರ್ಯಾಯವಾಗಿ ಐದು ಎಕರೆ ಜಮೀನನ್ನು ನೀಡುವಂತೆ ಸರ್ಕಾರಕ್ಕೆ ನಿರ್ದೇಶಿಸಿತು.

ಚಂಡೀಗಢ ಮೇಯರ್ ಚುನಾವಣೆ: 2024ರ ಚಂಡೀಗಢ ಮೇಯರ್ ಚುನಾವಣೆಯಲ್ಲಿ ಚುನಾವಣಾ ಅಧಿಕಾರಿಯೊಬ್ಬರು ಮತಪತ್ರಗಳನ್ನು ಅಕ್ರಮವಾಗಿ ಅಮಾನ್ಯಗೊಳಿಸಿದ ಪ್ರಕರಣ ದೇಶಾದ್ಯಂತ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಈ ಪ್ರಕರಣದಲ್ಲಿ ಮಧ್ಯಪ್ರವೇಶಿಸಿದ ಸುಪ್ರೀಂ ಕೋರ್ಟ್, ಕಾನೂನು ಪ್ರಕ್ರಿಯೆಯಂತೆ ಇಡೀ ಚುನಾವಣೆಯನ್ನು ರದ್ದುಗೊಳಿಸಿ ಮತ್ತೆ ಹೊಸದಾಗಿ ಚುನಾವಣೆ ನಡೆಸಲು ಆದೇಶಿಸುವ ಬದಲು, ಅನುಚ್ಛೇದ 142ಅನ್ನು ಬಳಸಿ, ಅಕ್ರಮವಾಗಿ ತಿರಸ್ಕರಿಸಲಾಗಿದ್ದ ಮತಗಳಿಗೆ ಸಿಂಧುತ್ವಕೊಟ್ಟು, ನಿಜವಾದ ವಿಜೇತರನ್ನು ಮೇಯರ್ ಎಂದು ಘೋಷಿಸಿತು.

ಈಗ, ಜೆನ್-ಝೀ ವಿದ್ಯಾರ್ಥಿ-ಯುವಜನರ ವಿರುದ್ಧದ ರದ್ದು

ಕಳೆದ ಜುಲೈ ತಿಂಗಳಿನಲ್ಲಿ; ಪರೀಕ್ಷಾ ಅಕ್ರಮಗಳ ವಿರುದ್ಧ ಸಿಜೆಪಿ ನೇತೃತ್ವದಲ್ಲಿ ದೇಶಾದ್ಯಂತ ವಿದ್ಯಾರ್ಥಿಗಳು ಮತ್ತು ಯುವಜನರು ಬೃಹತ್ ಪ್ರತಿಭಟನೆಗಳನ್ನು ನಡೆಸಿದ್ದರು. ಜುಲೈ 20ರಂದು ಶಾಂತಿಯುತ ಸಂಸತ್ ಚಲೋ ಮೆರವಣಿಗೆ ಹೊರಟಿದ್ದರು. ಈ ವೇಳೆ, ಪೊಲೀಸರು ಯುವಜನರ ಮೇಲೆ ಅಮಾನವೀಯ ದೌರ್ಜನ್ಯ ನಡೆಸಿದ್ದರು. ಮಾತ್ರವಲ್ಲದೆ, ಎಫ್‌ಐಆರ್‌ಗಳನ್ನೂ ದಾಖಲಿಸಿದ್ದರು. ಆ ನಂತರ, ದೇಶಾದ್ಯಂತ ನಡೆದ ವಿದ್ಯಾರ್ಥಿ-ಯುವಜನರ ಪ್ರತಿಭಟನೆಗಳಿಗೂ ಸಂಬಂಧಿಸಿದಂತೆ ನೂರಾರು ಎಫ್‌ಐಆರ್‌ಗಳನ್ನು ದಾಖಲಿಸಿದ್ದರು.

ಕೇಂದ್ರ ಸರ್ಕಾರವು ವಿದ್ಯಾರ್ಥಿ-ಯುವಜನರ ವಿರುದ್ಧದ ಎಫ್‌ಐಆರ್‌ಗಳನ್ನು ಹಿಂಪಡೆಯುವುದಾಗಿ ಭರವಸೆ ನೀಡಿತ್ತಾದರೂ, ತನ್ನ ಭರವಸೆಯನ್ನು ಪೂರ್ಣಗೊಳಿಸಲಿಲ್ಲ. ಪರಿಣಾಮವಾಗಿ, ಸಾವಿರಾರು ಯುವಜನರ ಭವಿಷ್ಯಕ್ಕೆ ಕತ್ತಲೆ ಆವರಿಸಿತು. ವಿದ್ಯಾರ್ಥಿ-ಯುವಜನರು ತಮ್ಮ ವಿರುದ್ಧದ ಎಫ್‌ಐಆರ್ ರದ್ದತಿಗಾಗಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿಸಿದರು. ಪ್ರಕರಣಗಳ ಗಂಭೀರತೆ ಮತ್ತು ಪ್ರತಿಭಟನಾ ನಿರತರ ಹಕ್ಕುಗಳನ್ನು ಪರಿಶೀಲಿಸಿದ ನ್ಯಾಯಾಲಯವು 142ನೇ ವಿಧಿಯಡಿ ಎಫ್‌ಐಆರ್‌ಗಳನ್ನು ರದ್ದುಗೊಳಿಸಿದೆ.

ಅನುಚ್ಛೇದ 142 ಕುರಿತಾದ ಟೀಕೆಗಳು

ಸುಪ್ರೀಂ ಕೋರ್ಟ್‌ನ ಈ ಅಸಾಧಾರಣ ಅಧಿಕಾರಕ್ಕೆ ಶಾಸಕಾಂಗದ ಅಸಮಾಧಾನವಿದೆ ಎಂಬುದು ಸ್ಪಷ್ಟ. ಸಂವಿಧಾನದ 142ನೇ ವಿಧಿಯು ನ್ಯಾಯಾಂಗ ಅತಿಕ್ರಮಣಕ್ಕೆ ಕಾರಣವಾಗುತ್ತದೆ ಎಂದು ಆಳುವವರು ವಾದಿಸುತ್ತಾರೆ.

''ದೇಶದಲ್ಲಿ ಕಾನೂನುಗಳನ್ನು ರೂಪಿಸುವ ಸಂಪೂರ್ಣ ಹಕ್ಕು ಜನಪ್ರತಿನಿಧಿಗಳನ್ನೊಳಗೊಂಡ ಶಾಸಕಾಂಗಕ್ಕಿದೆ. ಆ ಕಾನೂನುಗಳನ್ನು ಜಾರಿಗೊಳಿಸುವ ಹೊಣೆಗಾರಿಕೆ ಕಾರ್ಯಾಂಗಕ್ಕಿದೆ. ನ್ಯಾಯಾಲಯಗಳು ತಮ್ಮ ಸಂವಿಧಾನಿಕ ಮಿತಿಯೊಳಗಷ್ಟೇ ಕೆಲಸ ಮಾಡಬೇಕು. ಅನುಚ್ಛೇದ 142ನ್ನು ಪದೇ ಪದೇ ಪ್ರಯೋಗಿಸುವುದರಿಂದ ಸಂವಿಧಾನದ ಮೂಲ ತತ್ವವಾದ ಅಧಿಕಾರ ವಿಭಜನೆಗೆ ಧಕ್ಕೆಯಾಗುತ್ತದೆ. ನ್ಯಾಯಾಂಗವು ಕಾರ್ಯಾಂಗ ಅಥವಾ ಶಾಸಕಾಂಗದ ಕಾರ್ಯವ್ಯಾಪ್ತಿಯಲ್ಲಿ ಅನಗತ್ಯವಾಗಿ ಮಧ್ಯಪ್ರವೇಶಿಸಿದಂತಾಗುತ್ತದೆ'' ಎಂದು ಆಳುವ ವರ್ಗ ಪ್ರತಿಪಾದಿಸುತ್ತದೆ.

ಆದಾಗ್ಯೂ, ಭಾರತೀಯ ಸಂವಿಧಾನವು ಪ್ರಜಾಪ್ರಭುತ್ವದ ಮೂರು ಅಂಗಗಳಾದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗಗಳ ನಡುವೆ ಸ್ಪಷ್ಟವಾದ ಅಧಿಕಾರ ಹಂಚಿಕೆಯನ್ನು ಮಾಡಿದೆ. ಅನುಚ್ಛೇದ 142 ಈ ಸಮತೋಲಿತ ವ್ಯವಸ್ಥೆಯನ್ನು ಬುಡಮೇಲು ಮಾಡುವುದಿಲ್ಲ; ಬದಲಾಗಿ ಕಾರ್ಯಾಂಗ ಅಥವಾ ಶಾಸಕಾಂಗದ ಲೋಪಗಳಿಂದ ಸಾರ್ವಜನಿಕರಿಗೆ ಅನ್ಯಾಯವಾದಾಗ, ತಕ್ಷಣಕ್ಕೆ ನ್ಯಾಯ ಒದಗಿಸಲು ನ್ಯಾಯಾಂಗಕ್ಕೆ ಇರುವ ಅವಕಾಶವಾಗಿದೆ.

ನ್ಯಾಯದ ಕೊನೆಯ ದೀಪ

ಅನುಚ್ಛೇದ 142 ಭಾರತೀಯ ನ್ಯಾಯಾಂಗ ವ್ಯವಸ್ಥೆಯ ಅತ್ಯಂತ ವಿಶಿಷ್ಟ ಮತ್ತು ಶಕ್ತಿಶಾಲಿ ಅಸ್ತ್ರ. ಇದು ಕಾನೂನುಗಳ ತಾಂತ್ರಿಕ ಚೌಕಟ್ಟನ್ನು ಮೀರಿ, ಸಂವಿಧಾನದ ಜೀವಂತ ಆತ್ಮವಾದ ನ್ಯಾಯವನ್ನು ಕಾಪಾಡುವ ಮಹತ್ವದ ಸಾಧನವೂ ಕೂಡ. ಸಮಾಜದ ದುರ್ಬಲರು, ಸಂಕಷ್ಟದಲ್ಲಿರುವ ಸಂತ್ರಸ್ತರು ಹಾಗೂ ಸಾಮಾನ್ಯ ಕಾನೂನು ಪ್ರಕ್ರಿಯೆಯಲ್ಲಿ ನ್ಯಾಯ ಸಿಗದೆ ಅಲೆದಾಡುವ ಅಸಹಾಯಕ ನಾಗರಿಕರಿಗೆ ಇದು ಕೊನೆಯ ಭರವಸೆಯ ಬೆಳಕೂ ಆಗಿದೆ.

ಆದರೆ, ಕತ್ತಿ ಎರಡೂ ಕಡೆಗೆ ಹರಿತವಾಗಿರುವಂತೆ, ಈ ಅಧಿಕಾರದ ಬಳಕೆಯು ಅತ್ಯಂತ ಎಚ್ಚರಿಕೆ, ಸಂಯಮ ಮತ್ತು ಜವಾಬ್ದಾರಿಯಿಂದ ಕೂಡಿರಬೇಕು. ಸುಪ್ರೀಂ ಕೋರ್ಟ್ ಸ್ವತಃ ಹಲವು ತೀರ್ಪುಗಳಲ್ಲಿ ಹೇಳಿರುವಂತೆ, 142ನೇ ವಿಧಿಯಡಿ ಇರುವ ಈ ಅಧಿಕಾರವನ್ನು ಕೇವಲ ಅತ್ಯಂತ ಅಸಾಧಾರಣ ಸಂದರ್ಭಗಳಲ್ಲಿ ಮಾತ್ರವೇ ಬಳಸಬೇಕಾಗುತ್ತದೆ.

ಮಕ್ಕಳ ಲೈಂಗಿಕ ದೌರ್ಜನ್ಯ ಪ್ರಚಾರ ಜಾಹೀರಾತು: ಮೆಟಾ ವಿರುದ್ಧ ತನಿಖೆಗೆ ಮುಂದಾದ

ಮೆಟಾ ಸಂಸ್ಥೆಗೆ ಸೇರಿದ ಇನ್‌ಸ್ಟಾಗ್ರಾಮ್ ಸಾಮಾಜಿಕ ಜಾಲತಾಣದಲ್ಲಿ ಮಕ್ಕಳ ಲೈಂಗಿಕ ದೌರ್ಜನ್ಯ ವಿಷಯವಸ್ತುವಿಗೆ () ಪ್ರವೇಶ ಕಲ್ಪಿಸುವ ಹಾಗೂ ಪ್ರಚಾರ ನೀಡುವ ಪಾವತಿಸಿದ ಜಾಹೀರಾತುಗಳು ಪ್ರದರ್ಶನಗೊಳ್ಳುತ್ತಿರುವ ಗಂಭೀರ ಆರೋಪಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ () ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆಗೆ ಮುಂದಾಗಿದೆ.

ಆಯೋಗದ ಸದಸ್ಯ ಪ್ರಿಯಾಂಕ್ ಕಾನೂನಗೋ ಅವರನ್ನೊಳಗೊಂಡ ಪೀಠವು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ (), ಮಾಹಿತಿ ಮತ್ತು ಪ್ರಸಾರ ಸಚಿವಾಲಯ () ಹಾಗೂ ದೆಹಲಿ ಪೊಲೀಸರಿಗೆ ನೋಟಿಸ್ ನೀಡಿದೆ. ಮುಂದಿನ ಎರಡು ವಾರಗಳ ಒಳಗಾಗಿ ಕೈಗೊಂಡ ಕ್ರಮಗಳ ಕುರಿತು ಹಂತ-ಹಂತದ ವರದಿ ಸಲ್ಲಿಸುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಬಿಬಿಸಿ ವರ್ಲ್ಡ್ ಸರ್ವಿಸ್ ( ) ಪ್ರಕಟಿಸಿದ ತನಿಖಾ ವರದಿಯ ಆಧಾರದ ಮೇಲೆ ಈ ಕ್ರಮ ಕೈಗೊಂಡಿದೆ. ಇನ್‌ಸ್ಟಾಗ್ರಾಮ್‌ನಲ್ಲಿ ಆಕ್ಷೇಪಾರ್ಹ ಪದಗಳನ್ನು ಬಳಸಿಕೊಂಡು ಜಾಹೀರಾತುಗಳನ್ನು ಪ್ರದರ್ಶಿಸಲಾಗುತ್ತಿತ್ತು ಹಾಗೂ ಬಳಕೆದಾರರು ಈ ಜಾಹೀರಾತುಗಳನ್ನು ಕ್ಲಿಕ್ ಮಾಡಿದಾಗ, ಅವರನ್ನು ಟೆಲಿಗ್ರಾಂ ಚಾನೆಲ್‌ಗಳಿಗೆ ಮರುನಿರ್ದೇಶಿಸಿ ಅಲ್ಲಿ ಬಾಲ ಲೈಂಗಿಕ ದೌರ್ಜನ್ಯದ ವೀಡಿಯೊಗಳನ್ನು ಮಾರಾಟ ಮಾಡಲಾಗುತ್ತಿತ್ತು ಎಂಬ ಆಘಾತಕಾರಿ ಮಾಹಿತಿ ಹೊರಬಿದ್ದಿದೆ.

ಮೆಟಾ ಸಂಸ್ಥೆಯ ಕೃತಕ ಬುದ್ಧಿಮತ್ತೆ () ಮತ್ತು ಅಲ್ಗರಿದಮ್‌ಗಳು ವಿಷಯವಸ್ತುಗಳನ್ನು ಶಿಫಾರಸು ಮಾಡಲು, ಪ್ರಚಾರ ಮಾಡಲು ಮತ್ತು ಮಾಧ್ಯಮ ಆದಾಯ ಗಳಿಸಲು ಸಕ್ರಿಯವಾಗಿ ನೆರವಾಗುತ್ತಿವೆ. ಇಂತಹ ಸಂದರ್ಭದಲ್ಲಿ ಮೆಟಾವನ್ನು ಕೇವಲ ನಿಷ್ಕ್ರಿಯ ಮಧ್ಯವರ್ತಿ ಎಂದು ಪರಿಗಣಿಸಲು ಸಾಧ್ಯವೇ ಹಾಗೂ ಅದನ್ನು ಪ್ರಕಾಶಕ ಎಂದು ಪರಿಗಣಿಸಬೇಕೇ ಎಂಬುದನ್ನು ಪರಿಶೀಲಿಸಲು ಸಚಿವಾಲಯಗಳಿಗೆ ಸೂಚಿಸಿದೆ.

ಮಕ್ಕಳನ್ನು ಲೈಂಗಿಕ ಶೋಷಣೆಯಿಂದ ರಕ್ಷಿಸುವ ಪೋಕ್ಸೊ ಕಾಯ್ದೆಯ ಸೆಕ್ಷನ್ 19ರ ಅಡಿಯಲ್ಲಿ ಇಂತಹ ಅಪರಾಧಗಳ ಮಾಹಿತಿ ದೊರೆತ ತಕ್ಷಣ ಪೊಲೀಸರಿಗೆ ವರದಿ ಮಾಡುವುದು ಕಡ್ಡಾಯವಾಗಿದೆ. ಮೆಟಾ ಸಂಸ್ಥೆ ಈ ಕಾಯ್ದೆಯನ್ನು ಉಲ್ಲಂಘಿಸಿದೆಯೇ ಎಂಬುದನ್ನು ಸ್ಪಷ್ಟಪಡಿಸುವಂತೆ ಗೆ ಸೂಚಿಸಲಾಗಿದೆ.

ಮಾಹಿತಿ ತಂತ್ರಜ್ಞಾನ () ಕಾಯ್ದೆಯ ಸೆಕ್ಷನ್ 79 ನೀಡುವ ಸುರಕ್ಷತಾ ಅನುಕೂಲವು ಪೋಕ್ಸೊ ಕಾಯ್ದೆಯಡಿ ಬರುವ ಹೊಣೆಗಾರಿಕೆಯಿಂದ ಕಂಪನಿಯನ್ನು ಮುಕ್ತಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಇದು ಕೇವಲ ಆಕ್ಷೇಪಾರ್ಹ ವಿಷಯವಸ್ತುವಿನ ಹರಡುವಿಕೆ ಮಾತ್ರವಲ್ಲದೆ, ಮಕ್ಕಳ ಲೈಂಗಿಕ ಶೋಷಣೆ, ಸಂಘಟಿತ ಅಪರಾಧ ಮತ್ತು ಕಾನೂನುಬಾಹಿರ ಹಣಗಳಿಕೆಯ ಗಂಭೀರ ಪ್ರಕರಣವಾಗಿದೆ ಎಂದು ಕಳವಳ ವ್ಯಕ್ತಪಡಿಸಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR